ಸಂಪುಟ : 11 ಸಂಚಿಕೆ: 120 ಪುಟ : 4+2 ಬೆಲೆ: 3.00 ಶನಿವಾರ ಜೂನ್ 13 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 120 Pages : 4+2 Price : 3.00 Saturday june 13 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಆರ್‌ಟಿಓ ಕಚೇರಿ ಮೇಲೆ ಲೋಕಾಯುಕ್ತ ರೇಡ್!

■ವಿಜಯಸಾಕ್ಷಿ ಸುದ್ದಿ, ರಾಮನಗರ

ಜಿಲ್ಲೆಯ ಪ್ರಾದೇಶಿಕ ಸಾರಿಗೆ ಕಚೇರಿಯಲ್ಲಿ ನಡೆಯುತ್ತಿದ್ದ ಭ್ರಷ್ಟಾಚಾರ ಹಾಗೂ ಸಾರ್ವಜನಿಕ ದೂರುಗಳ ಹಿನ್ನೆಲೆಯಲ್ಲಿ ಲೋಕಾಯುಕ್ತ ಅಧಿಕಾರಿಗಳು ಬೆಳಗ್ಗೆ ದಿಢೀರ್ ದಾಳಿ ನಡೆಸಿದ್ದಾರೆ. ಲೋಕಾಯುಕ್ತ ಎಸ್‌ಪಿ ಪಿ.ವಿ. ಸ್ನೇಹಾ ಅವರ ನೇತೃತ್ವದಲ್ಲಿ ನಡೆದ ಈ ಕಾರ್ಯಾಚರಣೆಯಲ್ಲಿ ಕಚೇರಿಯಲ್ಲಿನ ಎಲ್ಲಾ ಪ್ರಮುಖ ದಾಖಲೆಗಳನ್ನು ಪರಿಶೀಲಿಸಲಾಗಿದ್ದು, ಹಲವು ಅಕ್ರಮಗಳು ಬೆಳಕಿಗೆ ಬಂದಿವೆ ಎಂದು ತಿಳಿದು ಬಂದಿದೆ.

ನಿಯಮದ ಪ್ರಕಾರ 7 ದಿನಗಳಲ್ಲಿ ವಿತರಿಸಬೇಕಾಗಿದ್ದ ಲೈಸೆನ್ಸ್ ಮತ್ತು ಆರ್‌ಸಿ ಸ್ಮಾರ್ಟ್ ಕಾರ್ಡ್‌ಗಳು ತಿಂಗಳುಗಳ ಕಾಲ ವಿಳಂಬವಾಗಿ ಕಚೇರಿಯಲ್ಲೇ ಸಂಗ್ರಹವಾಗಿದ್ದವು ಎಂಬುದು ದಾಳಿ ವೇಳೆ ಪತ್ತೆಯಾಗಿದೆ. ಸಾರ್ವಜನಿಕರು ನೇರವಾಗಿ ಬಂದರೆ ಕೆಲಸ ವಿಳಂಬವಾಗುತ್ತಿದ್ದು, ಏಜೆಂಟ್‌ಗಳ ಮೂಲಕ ಹಣ ನೀಡಿದರೆ ಮಾತ್ರ ಕೆಲಸ ಮಾಡಲಾಗುತ್ತಿತ್ತು ಎಂಬ ದೂರುಗಳಿಗೂ ತಾಳೆ ಸಿಕ್ಕಿದೆ ಎಂದು ಮೂಲಗಳು ತಿಳಿಸಿವೆ.

ಇದೇ ಕಚೇರಿಯಲ್ಲಿ ಏಜೆಂಟ್‌ಗಳ ನಡುವೆ ಕಮಿಷನ್ ವಿಚಾರಕ್ಕೆ ನಡೆದ ಗಲಾಟೆಯ ಕುರಿತು ಯಾವುದೇ ಪೊಲೀಸ್ ದೂರು ದಾಖಲಿಸದಿರುವ ವಿಷಯವೂ ತನಿಖೆಯಲ್ಲಿ ಬೆಳಕಿಗೆ ಬಂದಿದೆ ಎಂದು ಹೇಳಲಾಗಿದೆ.

ಕಳೆದ ಒಂದು ವರ್ಷದಲ್ಲಿ ಇದೇ ಕಚೇರಿಯ ಮೇಲೆ ಮೂರು ಬಾರಿ ಲೋಕಾಯುಕ್ತ ದಾಳಿ ನಡೆದಿದ್ದರೂ ಭ್ರಷ್ಟಾಚಾರದಲ್ಲಿ ಬದಲಾವಣೆ ಕಂಡುಬಂದಿಲ್ಲ ಎಂದು ಆರೋಪಗಳು ಕೇಳಿ ಬಂದಿವೆ.

## ಜೂ.15ರಂದು ನೇರ ಸಂದರ್ಶನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ನಿರುದ್ಯೋಗಿ ಯುವಕರಿಗೆ ಉದ್ಯೋಗಾವಕಾಶ ಕಲ್ಪಿಸುವ ನಿಟ್ಟಿನಲ್ಲಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಜೂನ್ 15ರಂದು ನೇರ ಸಂದರ್ಶನವನ್ನು ಆಯೋಜಿಸಲಾಗಿದೆ.

ನಗರದ ಸ್ಟೇಷನ್ ರಸ್ತೆಯ ಹಳೆ ಕಾಮತ್ ಹೋಟೆಲ್ ಎದುರಿನ ಮುಥೂಟ್ ಫಿನ್‌ಕಾರ್ಪ್ ಲಿಮಿಟೆಡ್ ಕಚೇರಿಯಲ್ಲಿ ಸೋಮವಾರ ಬೆಳಿಗ್ಗೆ 10 ಗಂಟೆಯಿಂದ ಸಂದರ್ಶನ ನಡೆಯಲಿದೆ. ಈ ನೇಮಕಾತಿ ಪ್ರಕ್ರಿಯೆಯಲ್ಲಿ ಮುಥೂಟ್ ಫಿನ್‌ಕಾರ್ಪ್ ಲಿಮಿಟೆಡ್ ಸಂಸ್ಥೆ ಭಾಗವಹಿಸಲಿದ್ದು, ಬಿಸಿನೆಸ್ ಡೆವಲಪ್‌ಮೆಂಟ್ ಆಫೀಸರ್ ಹಾಗೂ ಕಸ್ಟಮರ್ ಸರ್ವಿಸ್ ಎಕ್ಸಿಕ್ಯೂಟಿವ್ ಹುದ್ದೆಗಳಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಿದೆ.

ಅಭ್ಯರ್ಥಿಗಳು ಯಾವುದೇ ಪದವಿಯನ್ನು ಹೊಂದಿರಬೇಕು ಹಾಗೂ ಕನಿಷ್ಠ ಆರು ತಿಂಗಳ ಅನುಭವ ಹೊಂದಿರಬೇಕು. 18 ರಿಂದ 28 ವರ್ಷ ವಯೋಮಿತಿಯ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ಗದಗ, ನರಗುಂದ, ರೋಣ, ಮುಂಡರಗಿ, ಗಜೇಂದ್ರಗಡ, ಹುಲಕೋಟಿ, ಅಣ್ಣಿಗೇರಿ ಹಾಗೂ ಲಕ್ಷ್ಮೇಶ್ವರ ಪ್ರದೇಶಗಳಲ್ಲಿ ಉದ್ಯೋಗಾವಕಾಶ ಕಲ್ಪಿಸಲಾಗುವುದು.

ನೇರ ಸಂದರ್ಶನಕ್ಕೆ ಆಗಮಿಸುವ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳು, ಎರಡು ಬಯೋಡಾಟಾ (ರೆಸ್ಯೂಮೆ) ಪ್ರತಿಗಳು ಹಾಗೂ ಆಧಾರ್ ಕಾರ್ಡ್ ಜೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಬೇಕು. ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ನೋಂದಣಿ ಕಡ್ಡಾಯವಾಗಿದ್ದು, ಯುವನಿಧಿ ಯೋಜನೆಯ ಫಲಾನುಭವಿಗಳು ಕಡ್ಡಾಯವಾಗಿ ಭಾಗವಹಿಸುವಂತೆ ಸೂಚಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ 8431602181 ಹಾಗೂ 6363330688 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗಾಧಿಕಾರಿ ಬಸವಂತ ಪಿ.ಎನ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡುವಂತೆ ಆಗ್ರಹ: ಮಠಾಧೀಶರ ಬೆಂಬಲ – ವಿಷ ಸೇವನೆ ಯತ್ನದಿಂದ ಹೈಡ್ರಾಮಾ

# ಸಚಿವ ಸ್ಥಾನಕ್ಕಾಗಿ ಕಾರ್ಮಿಕರ ಹಕ್ಕೊತ್ತಾಯ

■ವಿಜಯಸಾಕ್ಷಿ ಸುದ್ದಿ, ರೋಣ

ಶಾಸಕ ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡಬೇಕು ಎಂದು ಆಗ್ರಹಿಸಿ ತಾಲೂಕು ಕಟ್ಟಡ ಮತ್ತು ಕೂಲಿ ಕಾರ್ಮಿಕರ ಸಂಘಟನೆ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಹಕ್ಕೊತ್ತಾಯ ಪ್ರತಿಭಟನೆ ಹಾಗೂ ಬೃಹತ್ ಮೆರವಣಿಗೆ ನೂರಾರು ಕಾರ್ಮಿಕರ ಭಾಗವಹಿಸುವಿಕೆಯಿಂದ ಗಮನ ಸೆಳೆಯಿತು.

ಪಟ್ಟಣದ ಸಿದ್ದಾರೂಢ ಮಠದಿಂದ ಆರಂಭವಾದ ಪ್ರತಿಭಟನಾ ಮೆರವಣಿಗೆಗೆ ವಿವಿಧ ಮಠಾಧೀಶರು ಹಾಗೂ ದರ್ಗಾದ ಅಜ್ಜನವರು ಚಾಲನೆ ನೀಡಿದರು. ಸಚಿವ ಸಂಪುಟದಲ್ಲಿ ಈ ಬಾರಿ ಜಿ.ಎಸ್. ಪಾಟೀಲರಿಗೆ ಸ್ಥಾನ ನೀಡಲೇಬೇಕು ಎಂದು ಕಾರ್ಮಿಕರು ಘೋಷಣೆಗಳನ್ನು ಕೂಗಿ ಒತ್ತಾಯಿಸಿದರು.

ಮೆರವಣಿಗೆಯು ಸೂಡಿ ವೃತ್ತ, ಮುಲ್ಲಾನ ಭಾವಿ

> “ಶಾಸಕ ಜಿ.ಎಸ್. ಪಾಟೀಲರು ಕಳೆದ 50 ವರ್ಷಗಳಿಂದ ಪಕ್ಷಕ್ಕೆ ಪ್ರಾಮಾಣಿಕವಾಗಿ ಸೇವೆ ಸಲ್ಲಿಸಿದ್ದಾರೆ. ಅವರ ಸೇವೆಯನ್ನು ಪರಿಗಣಿಸಿ ಸಚಿವ ಸ್ಥಾನ ನೀಡಬೇಕು. ಇದು ನಮ್ಮ ನ್ಯಾಯಯುತ ಬೇಡಿಕೆ. ಇದಕ್ಕೆ ಸ್ಪಂದಿಸದಿದ್ದರೆ ನಾವು ಪ್ರಾಣತ್ಯಾಗಕ್ಕೂ ಸಿದ್ಧರಿದ್ದೇವೆ. ಮುಂದಾಗುವ ಯಾವುದೇ ಅನಾಹುತಕ್ಕೆ ಪಕ್ಷದ ವರಿಷ್ಠರೇ ಹೊಣೆ.”
> **– ವಿನಾಯಕ ಜಕ್ಕಣಗೌಡ್ರ, ಕಾಂಗ್ರೆಸ್ ಮುಖಂಡ**



ಮಾರ್ಗವಾಗಿ ಪೋತರಾಜನ ಕಟ್ಟೆ ತಲುಪಿದ ವೇಳೆ ಪ್ರತಿಭಟನಾಕಾರರು ಮಾನವ ಸರಪಳಿ ನಿರ್ಮಿಸಿ ಕಾಂಗ್ರೆಸ್ ಹೈಕಮಾಂಡ್ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

ಜಿ.ಎಸ್. ಪಾಟೀಲರಿಗೆ ಕೊಟ್ಟ ಮಾತಿನಂತೆ ಸಚಿವ ಸ್ಥಾನ ನೀಡಬೇಕು. ಇಲ್ಲವಾದಲ್ಲಿ ಮುಂದಿನ ಚುನಾವಣೆಗಳಲ್ಲಿ ಮತದಾನ ಬಹಿಷ್ಕರಿಸುವ ಬಗ್ಗೆ ಚಿಂತನೆ ನಡೆಸಬೇಕಾಗುತ್ತದೆ ಎಂದು ಎಚ್ಚರಿಕೆ ಸಂದೇಶ ರವಾನಿಸಿದರು.

**ವಿಷ ಸೇವನೆ ಯತ್ನ; ಕೆಲಕಾಲ ಉದ್ವಿಗ್ನತೆ**

ಪ್ರತಿಭಟನೆ ಪೋತರಾಜನ ಕಟ್ಟೆ ತಲುಪುತ್ತಿದ್ದಂತೆ ಶಾಸಕ ಜಿ.ಎಸ್. ಪಾಟೀಲರ ಅಭಿಮಾನಿಗಳಾದ ಸಂಗಪ್ಪ ಜಿಡ್ಡಿಬಾಗಿಲ, ಶಾಭಾಜ್ ಗದಗಕರ್ ಹಾಗೂ ದಾವಲಸಾಬ ಬಾಡಿನ ಅವರು ಕ್ರಿಮಿನಾಶಕ ಸೇವಿಸಲು ಮುಂದಾದ ಘಟನೆ ಕೆಲಕಾಲ ಉದ್ವಿಗ್ನ ವಾತಾವರಣ ಸೃಷ್ಟಿಸಿತು.

“ರೋಣ ಮತಕ್ಷೇತ್ರಕ್ಕೆ ನಿರಂತರ ಅನ್ಯಾಯವಾಗುತ್ತಿದೆ. ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ಜಿ.ಎಸ್. ಪಾಟೀಲರು ಪಕ್ಷವನ್ನು ಬಲಪಡಿಸಲು ಅಪಾರ ಶ್ರಮವಹಿಸಿದ್ದಾರೆ. ಆದರೂ ಸಚಿವ ಸ್ಥಾನ ನೀಡುವಲ್ಲಿ ವಿಳಂಬ ಧೋರಣೆ ಅನುಸರಿಸಲಾಗುತ್ತಿದೆ” ಎಂದು ಆಕ್ರೋಶ ವ್ಯಕ್ತಪಡಿಸಿದ ಅಭಿಮಾನಿಗಳು ವಿಷ ಸೇವಿಸಲು ಮುಂದಾದರು. ಕೂಡಲೇ ಪಕ್ಷದ ಮುಖಂಡರು ಮಧ್ಯಪ್ರವೇಶಿಸಿ ಅವರನ್ನು ಸಮಾಧಾನಪಡಿಸಿ ಕ್ರಿಮಿನಾಶಕವನ್ನು ವಶಪಡಿಸಿಕೊಂಡರು.

ಪ್ರತಿಭಟನೆಯ ಬಳಿಕ ಶ್ರೀಗಳು ಹಾಗೂ ಕಾರ್ಯಕರ್ತರು ಪೋತರಾಜನ ಕಟ್ಟೆ ಸಮೀಪದ ದರ್ಗಾದಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಹಜರತ್ ಸುಲೇಮಾನ್ ಶಾವಲಿ ಅಜ್ಜನವರು, ಶಿವಮುನಿ ಶ್ರೀಗಳು, ಮರುಳ ಸಿದ್ದೇಶ್ವರ ಶ್ರೀಗಳು, ದಿವಾನ್ ಶರೀಫ್ ಶ್ರೀಗಳು, ಬಸವರಾಜ ಶರಣರು, ಹುಚ್ಚಯ್ಯ ಶ್ರೀಗಳು, ವಿಶ್ವನಾಥ ಶ್ರೀಗಳು, ಗದಿಗೆಪ್ಪ ಕಿರೇಸೂರ, ಯೂಸುಫ್ ಇಟಗಿ, ಬಾವಾಸಾಬ ಬಟಗೇರಿ, ಆನಂದ ಚಂಗಳಿ, ದುರ್ಗಪ್ಪ ಹಿರೇಮನಿ, ಮಲೀಕ ಯಲಿಗಾರ, ಹನ್ಮಂತಪ್ಪ ತಳ್ಳಿಕೇರಿ, ಅಸ್ಲಂ ಕೊಪ್ಪಳ, ಬಶೀರ ಕಟ್ಟಿಮನಿ, ಮೌನೇಶ ಹಾದಿಮನಿ, ಮಕ್ತುಂಸಾಬ ಮುಲ್ಲಾ, ಕೆ.ಕೆ. ಮುಲ್ಲಾ, ಸಂಜಯ ದೊಡ್ಡಮನಿ ಸೇರಿದಂತೆ ನೂರಾರು ಕಾರ್ಮಿಕರು ಪಾಲ್ಗೊಂಡಿದ್ದರು.

**ಸಚಿವ ಸ್ಥಾನ ನೀಡದಿದ್ದರೆ ವಿಧಾನಸೌಧ ಚಲೋ**

ಮರುಳ ಸಿದ್ದೇಶ್ವರ ಪುಣ್ಯಾಶ್ರಮದ ಶ್ರೀ ಶಿವಶರಣ ಗದಿಗೆಪ್ಪಜ್ಜನವರು ಮಾತನಾಡಿ, “ಜಿ.ಎಸ್. ಪಾಟೀಲರು ಎಲ್ಲ ಸಮುದಾಯಗಳನ್ನು ಒಗ್ಗೂಡಿಸಿಕೊಂಡು ಹೋಗುವ ಹೃದಯವಂತ ನಾಯಕ. ಪಕ್ಷ ನೀಡಿದ ಎಲ್ಲ ಜವಾಬ್ದಾರಿಗಳನ್ನು ಸಮರ್ಥವಾಗಿ ನಿರ್ವಹಿಸಿದ್ದಾರೆ. ಅವರ ಪ್ರಾಮಾಣಿಕ ಸೇವೆಯನ್ನು ಗುರುತಿಸಿ ಸಚಿವ ಸ್ಥಾನ ನೀಡಬೇಕು. ಇಲ್ಲವಾದಲ್ಲಿ ಶ್ರೀಗಳ ನೇತೃತ್ವದಲ್ಲಿ ‘ವಿಧಾನಸೌಧ ಚಲೋ’ ಹೋರಾಟ ಹಮ್ಮಿಕೊಳ್ಳಬೇಕಾಗುತ್ತದೆ” ಎಂದು ಎಚ್ಚರಿಕೆ ನೀಡಿದರು.

### ಶಿರಹಟ್ಟಿಯಲ್ಲಿ ವಿಶ್ವ ಬಾಲಕಾರ್ಮಿಕ ವಿರೋಧಿ ದಿನಾಚರಣೆ

# ಶಿಕ್ಷಣದಿಂದ ಯಾವ ಮಗುವೂ ವಂಚಿತರಾಗಬಾರದು

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ವಿಶ್ವ ಬಾಲಕಾರ್ಮಿಕ ವಿರೋಧಿ ದಿನಾಚರಣೆ ಅಂಗವಾಗಿ ಶಿರಹಟ್ಟಿ ಪಟ್ಟಣದ ಸಿಸಿಎನ್ ಸರ್ಕಾರಿ ಪ್ರೌಢಶಾಲೆಯಲ್ಲಿ ತಾಲೂಕು ಕಾನೂನು ಸೇವೆಗಳ ಸಮಿತಿ ಲಕ್ಷ್ಮೇಶ್ವರ, ತಾಲೂಕು ಆಡಳಿತ ಶಿರಹಟ್ಟಿ, ಪೊಲೀಸ್ ಇಲಾಖೆ, ಕಾರ್ಮಿಕ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ಶುಕ್ರವಾರ ಜಾಗೃತಿ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮವನ್ನು ಲಕ್ಷ್ಮೇಶ್ವರ–ಶಿರಹಟ್ಟಿ ತಾಲೂಕು ಕಾನೂನು ಸೇವಾ ಸಮಿತಿ ಸದಸ್ಯ ಕಾರ್ಯದರ್ಶಿ ಹಾಗೂ ದಿವಾಣಿ ನ್ಯಾಯಾಧೀಶ ಸತೀಶ್ ಎಂ. ಅವರು ಸಸಿಗೆ ನೀರುಣಿಸುವ ಮೂಲಕ ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅವರು, “ಶಿಕ್ಷಣದಿಂದ



ಯಾವ ಮಗುವೂ ವಂಚಿತರಾಗಬಾರದು. ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಸಮಾಜದಲ್ಲಿ ಹೆಚ್ಚಿನ ಜಾಗೃತಿ ಮೂಡಿಸುವ ಅಗತ್ಯವಿದೆ. ಮಕ್ಕಳಿಗೆ ಶಿಕ್ಷಣದ ಹಕ್ಕು ದೊರಕುವಂತೆ ಪ್ರತಿಯೊಬ್ಬರೂ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು” ಎಂದು ಹೇಳಿದರು.

ತಹಸೀಲ್ದಾರ್ ಕೆ. ರಾಘವೇಂದ್ರ ರಾವ್, ಸರ್ಕಾರಿ ಸಹಾಯಕ ಅಭಿಯೋಜಕಿ ಕು. ಹೀನಾಕೌಸರ ಗಂಜಿಹಾಳ ಹಾಗೂ ಪಿಎಸ್‌ಐ ಈರಪ್ಪ ರಿತ್ತಿ ಅವರು ಬಾಲಕಾರ್ಮಿಕ ಪದ್ಧತಿಯ ದುಷ್ಪರಿಣಾಮಗಳು ಮತ್ತು ಮಕ್ಕಳ ಹಕ್ಕುಗಳ ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ವಕೀಲರ ಸಂಘದ ಉಪಾಧ್ಯಕ್ಷ ಅನಿಲ ಮಾನೆ, ಬಿ.ಎಸ್. ಭಜಂತ್ರಿ, ವೀರನಗೌಡ ಪೊಲೀಸ್ ಪಾಟೀಲ, ಎಚ್.ಎಂ. ದೇವಗಿರಿ, ಅಭಿನಂದನ ಖವಟಕೊಪ್ಪ, ವೆಂಕಟೇಶ ಗುಡಗುಂಡಿ, ಸುಮಯ್ಯ ಸಯ್ಯದ, ಎಸ್.ಎಸ್. ಡೊಳ್ಳಿನ, ಉಮೇಶ ಹುಚ್ಚಯ್ಯನಮಠ, ವಿ.ಎಚ್. ದಿಆಳಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಗೋವಿಂದರಾವ್ ವರದಿಯಲ್ಲಿ ಜಿಲ್ಲೆಯ ಏಳು ತಾಲೂಕುಗಳೂ ಹಿಂದುಳಿದ ಪಟ್ಟಿಯಲ್ಲಿ ರಾಜು ಕುರುಡಗಿ ಆರೋಪ

# ಕಾಂಗ್ರೆಸ್ ಆಡಳಿತದಲ್ಲಿ ಗದಗ ಜಿಲ್ಲೆ ಅತಿ ಹಿಂದುಳಿದಿದೆ



> “ಗದಗ ಜಿಲ್ಲೆ ಕೈಗಾರಿಕೆ, ಶಿಕ್ಷಣ, ಆರೋಗ್ಯ, ಆದಾಯ ಹಾಗೂ ಸಾಮಾಜಿಕ ಮೂಲಸೌಕರ್ಯ ಕ್ಷೇತ್ರಗಳಲ್ಲಿ ಹಿಂದುಳಿದಿರುವುದು ವರದಿಯಿಂದ ಸಾಬೀತಾಗಿದೆ. ಜಿಲ್ಲೆಯ ಅಭಿವೃದ್ಧಿಯ ಬಗ್ಗೆ ಮಾತನಾಡುವ ಕಾಂಗ್ರೆಸ್ ನಾಯಕರು ಮೊದಲು ಈ ವರದಿಗೆ ಉತ್ತರ ನೀಡಬೇಕು.”
> **– ತೋಟಪ್ಪ (ರಾಜು) ಕುರುಡಗಿ,** ಬಿಜೆಪಿ ಜಿಲ್ಲಾಧ್ಯಕ್ಷರು

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯ ಗೋವಿಂದರಾವ್ ವರದಿಯಲ್ಲಿ ಗದಗ ಜಿಲ್ಲೆಯನ್ನು ಅತ್ಯಂತ ಹಿಂದುಳಿದ ಜಿಲ್ಲೆ ಎಂದು ಗುರುತಿಸಿರುವುದು ಜಿಲ್ಲೆಯ ಅಭಿವೃದ್ಧಿ ಸ್ಥಿತಿಗತಿಗಳನ್ನು ಬಯಲು ಮಾಡಿದ್ದು, ಇದಕ್ಕೆ ಕಾಂಗ್ರೆಸ್ ಆಡಳಿತ ಮತ್ತು ಮಾಜಿ ಸಚಿವ ಎಚ್.ಕೆ. ಪಾಟೀಲ ನೇರ ಹೊಣೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ಆರೋಪಿಸಿದರು.

ಪತ್ರಿಕಾ ಪ್ರಕಟಣೆ ಮೂಲಕ ಪ್ರತಿಕ್ರಿಯಿಸಿರುವ ಅವರು, ರಾಜ್ಯ ಸರ್ಕಾರ ನಂಜುಂಡಪ್ಪ ವರದಿ ಬದಲಿಗೆ ಗೋವಿಂದರಾವ್ ವರದಿ ಆಧರಿಸಿ ಅನುದಾನ ಹಂಚಿಕೆ ಮಾಡಲು ಮುಂದಾಗಿದ್ದು, ಹೊಸ ವರದಿಯಲ್ಲಿ ಗದಗ ಜಿಲ್ಲೆ ಅಭಿವೃದ್ಧಿ ಸೂಚ್ಯಂಕದಲ್ಲಿ ಹಿನ್ನಡೆ ಕಂಡಿರುವುದು ಸ್ಪಷ್ಟವಾಗಿದೆ ಎಂದು ಹೇಳಿದರು.

ಈ ಹಿಂದೆ ನಂಜುಂಡಪ್ಪ ವರದಿಯಲ್ಲಿ ಶಿರಹಟ್ಟಿ ಹಾಗೂ ರೋಣ ತಾಲೂಕುಗಳು ಮಾತ್ರ ಹಿಂದುಳಿದ ಪಟ್ಟಿಯಲ್ಲಿದ್ದವು. ಆದರೆ ಗೋವಿಂದರಾವ್ ವರದಿಯಲ್ಲಿ ಜಿಲ್ಲೆಯ ಎಲ್ಲಾ ಏಳು ತಾಲೂಕುಗಳು ಹಿಂದುಳಿದ ತಾಲೂಕುಗಳ ಪಟ್ಟಿಯಲ್ಲಿ ಸೇರಿರುವುದು ಜಿಲ್ಲೆಯ ಅಭಿವೃದ್ಧಿಯ ನೈಜ ಚಿತ್ರಣವನ್ನು ತೋರಿಸುತ್ತದೆ ಎಂದು ಅವರು ಹೇಳಿದರು.

ರೋಣ ಮತ್ತು ಮುಂಡರಗಿ ತಾಲೂಕುಗಳು ಆರೋಗ್ಯ, ಆದಾಯ ಹಾಗೂ ಶಿಕ್ಷಣ ಕ್ಷೇತ್ರದಲ್ಲಿ ಹೆಚ್ಚು ಹಿಂದುಳಿದಿವೆ. ನರಗುಂದ, ಲಕ್ಷ್ಮೇಶ್ವರ, ಶಿರಹಟ್ಟಿ, ಗಜೇಂದ್ರಗಡ ಹಾಗೂ ಗದಗ ತಾಲೂಕುಗಳೂ ವಿವಿಧ ಅಭಿವೃದ್ಧಿ ಮಾನದಂಡಗಳಲ್ಲಿ ಹಿನ್ನಡೆ ಕಂಡಿವೆ ಎಂದು ವರದಿ ಉಲ್ಲೇಖಿಸಿರುವುದಾಗಿ ತಿಳಿಸಿದ್ದಾರೆ. ಜಿಲ್ಲೆಯ ಅಭಿವೃದ್ಧಿ ಸೂಚ್ಯಂಕ ಮತ್ತು ತಲಾ ಆದಾಯದ ಸ್ಥಿತಿಯನ್ನು ಗಮನಿಸಿದರೆ ಜನಪ್ರತಿನಿಧಿಗಳು ಹಾಗೂ ಆಡಳಿತ ವ್ಯವಸ್ಥೆಯ ಕಾರ್ಯವೈಖರಿ ಬಗ್ಗೆ ಪ್ರಶ್ನೆಗಳು ಉದ್ಭವಿಸುತ್ತವೆ ಎಂದು ರಾಜು ಕುರುಡಗಿ ಆರೋಪಿಸಿದ್ದಾರೆ.

### ರಾಷ್ಟ್ರಮಟ್ಟದಲ್ಲಿ ಲಕ್ಕುಂಡಿ ಪರಿಚಯಕ್ಕೆ ಪ್ರಯತ್ನಿಸುವ ಭರವಸೆ ನೀಡಿದ ಛತ್ತೀಸ್‌ಗಢ ಸಚಿವರು

# ಐತಿಹಾಸಿಕ ಸ್ಮಾರಕಗಳ ಸಂರಕ್ಷಣೆ ಶ್ಲಾಘನೀಯ

■ವಿಜಯಸಾಕ್ಷಿ ಸುದ್ದಿ, ಗದಗ

ಛತ್ತೀಸ್‌ಗಢ ರಾಜ್ಯದ ಶಾಲಾ ಶಿಕ್ಷಣ, ಗ್ರಾಮೋದ್ಯಮ, ಕಾನೂನು ಹಾಗೂ ಶಾಸನ ವ್ಯವಹಾರಗಳ ಸಚಿವ ಗಜೇಂದ್ರ ಯಾದವ್ ಅವರು ಗುರುವಾರ ಗದಗ ಜಿಲ್ಲೆಯ ಐತಿಹಾಸಿಕ ಲಕ್ಕುಂಡಿ ಕ್ಷೇತ್ರಕ್ಕೆ ಭೇಟಿ ನೀಡಿ ಅಲ್ಲಿನ ಪುರಾತನ ದೇವಾಲಯಗಳು ಹಾಗೂ ಪಾರಂಪರಿಕ ಸ್ಮಾರಕಗಳನ್ನು ವೀಕ್ಷಿಸಿದರು.

ಲಕ್ಕುಂಡಿಯ ಐತಿಹಾಸಿಕ ಮತ್ತು ಧಾರ್ಮಿಕ ಮಹತ್ವದ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದ ಅವರು, ಇದು ದೇಶದ ಅಪರೂಪದ ಪರಂಪರೆ ತಾಣಗಳಲ್ಲಿ ಒಂದಾಗಿದ್ದು, ಭಗವಾನ್ ಮಹಾದೇವರ ವಿವಿಧ ಸ್ವರೂಪಗಳನ್ನು ಪ್ರತಿಬಿಂಬಿಸುವ ದೇವಾಲಯಗಳು ಹಾಗೂ ಶಿಲ್ಪಕಲಾ ವೈಭವದಿಂದ ವಿಶೇಷ ಸ್ಥಾನ ಪಡೆದಿದೆ ಎಂದು ಹೇಳಿದರು.



11ನೇ ಮತ್ತು 12ನೇ ಶತಮಾನಗಳ ಅಮೂಲ್ಯ ಪಾರಂಪರಿಕ ಸ್ಮಾರಕಗಳನ್ನು ಪುರಾತತ್ವ ಇಲಾಖೆ ಸಂರಕ್ಷಿಸಿ ಉಳಿಸಿರುವುದು ಶ್ಲಾಘನೀಯ ಕಾರ್ಯವಾಗಿದೆ. ಇಂತಹ ಐತಿಹಾಸಿಕ ತಾಣಗಳು ರಾಷ್ಟ್ರಮಟ್ಟದಲ್ಲಿ ಹೆಚ್ಚಿನ ಪ್ರಚಾರ ಪಡೆಯಬೇಕಿದ್ದು, ಈ ಕುರಿತು ಕೇಂದ್ರ ಸರ್ಕಾರದ ಸಂಬಂಧಿತ ಸಚಿವರೊಂದಿಗೆ ಚರ್ಚಿಸಿ ಲಕ್ಕುಂಡಿಯ ಮಹತ್ವವನ್ನು ದೇಶದಾದ್ಯಂತ ಪರಿಚಯಿಸಲು ಪ್ರಯತ್ನಿಸುವುದಾಗಿ ತಿಳಿಸಿದರು.

> “ಲಕ್ಕುಂಡಿ ದೇಶದ ಅತ್ಯಂತ ವಿಶಿಷ್ಟ ಪರಂಪರೆ ತಾಣಗಳಲ್ಲಿ ಒಂದಾಗಿದೆ. ಇಲ್ಲಿನ ಐತಿಹಾಸಿಕ ಸ್ಮಾರಕಗಳು ಮತ್ತು ಶಿಲ್ಪಕಲಾ ವೈಭವವನ್ನು ರಾಷ್ಟ್ರಮಟ್ಟದಲ್ಲಿ ಪರಿಚಯಿಸುವ ಅಗತ್ಯವಿದೆ.”
> **– ಗಜೇಂದ್ರ ಯಾದವ್,** ಛತ್ತೀಸ್‌ಗಢ ಸಚಿವರು

ಲಕ್ಕುಂಡಿ ಕ್ಷೇತ್ರದ ಅಭಿವೃದ್ಧಿ ಹಾಗೂ ಪರಂಪರೆಯ ಸಂರಕ್ಷಣೆಗಾಗಿ ಜಿಲ್ಲಾಡಳಿತ, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ, ಪೊಲೀಸ್ ಇಲಾಖೆ, ಶಿಕ್ಷಣ ಇಲಾಖೆ ಹಾಗೂ ಪ್ರವಾಸೋದ್ಯಮ ಇಲಾಖೆ ಕೈಗೊಂಡಿರುವ ಕಾರ್ಯಗಳನ್ನು ಅವರು ಶ್ಲಾಘಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ಸರ್ಕಾರದ ಮಾಜಿ ಕಾನೂನು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ, ಶಾಸಕ ಸಿ.ಸಿ. ಪಾಟೀಲ ಸೇರಿದಂತೆ ಸ್ಥಳೀಯ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳ ಸಹಕಾರಕ್ಕೆ ಕೃತಜ್ಞತೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಡಾ. ಶರಣ ಗೋಗೇರಿ, ತಹಸೀಲ್ದಾರ್ ಶ್ರೀನಿವಾಸ ಕುಲಕರ್ಣಿ, ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ಕೊಟ್ರೇಶ್ವರ ವಿಭೂತಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**4–5 ತಿಂಗಳಿಂದ ಪಿಂಚಣಿ ಬಾರದೇ ಸಂಕಷ್ಟ; ಅರ್ಹ ಫಲಾನುಭವಿಗಳಿಗೆ ತಕ್ಷಣ ಮಾಸಾಶನ ಬಿಡುಗಡೆಗೆ ಮನವಿ**

# ಮಾಸಾಶನ ಸ್ಥಗಿತಕ್ಕೆ ಹಿರಿಯರ ಆಕ್ರೋಶ



> “ಮಾಸಾಶನ ಇಲ್ಲದೆ ಹಿರಿಯ ನಾಗರಿಕರು, ವಿಧವೆಯರು ಹಾಗೂ ಅಂಗವಿಕಲರು ಜೀವನ ಸಾಗಿಸುವುದೇ ಕಷ್ಟವಾಗಿದೆ. ತಕ್ಷಣ ಬಾಕಿ ಪಿಂಚಣಿ ಬಿಡುಗಡೆ ಮಾಡದಿದ್ದರೆ ಹೋರಾಟ ಅನಿವಾರ್ಯ.”
>
> – **ಶ್ರೀಕಾಂತ ಹಾದಿಮನಿ,** ಸಾಹಿತಿ ಹಾಗೂ ಸಾಮಾಜಿಕ ಕಾರ್ಯಕರ್ತ

■ **ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ತಾಲೂಕಿನಲ್ಲಿ ಕಳೆದ ನಾಲ್ಕೈದು ತಿಂಗಳಿಂದ ಸಂಧ್ಯಾ ಸುರಕ್ಷಾ, ಇಂದಿರಾ ಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನ, ವಿಧವಾ ವೇತನ ಹಾಗೂ ಮನಸ್ವಿನಿ ಯೋಜನೆಯ ಮಾಸಾಶನಗಳು ಫಲಾನುಭವಿಗಳ ಖಾತೆಗೆ ಜಮೆಯಾಗದ ಹಿನ್ನೆಲೆಯಲ್ಲಿ ಹಿರಿಯ ನಾಗರಿಕರು, ವಿಧವೆಯರು ಹಾಗೂ ಅಂಗವಿಕಲರಲ್ಲಿ ತೀವ್ರ ಅಸಮಾಧಾನ ವ್ಯಕ್ತವಾಗಿದೆ.

ಈ ಹಿನ್ನೆಲೆ ಸಾಹಿತಿ ಹಾಗೂ ಸಾಮಾಜಿಕ ಕಾರ್ಯಕರ್ತ ಶ್ರೀಕಾಂತ ಹಾದಿಮನಿ ನೇತೃತ್ವದಲ್ಲಿ ಫಲಾನುಭವಿಗಳು ತಹಸೀಲ್ದಾರ್ ಕೆ. ರಾಘವೇಂದ್ರ ರಾವ್ ಅವರ ಮೂಲಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರಿಗೆ ಮನವಿ ಸಲ್ಲಿಸಿ, ಬಾಕಿ ಉಳಿದಿರುವ ಮಾಸಾಶನವನ್ನು ತಕ್ಷಣ ಬಿಡುಗಡೆ ಮಾಡುವಂತೆ ಆಗ್ರಹಿಸಿದರು.

ಮನವಿಯಲ್ಲಿ, ಮಾಸಾಶನವೇ ಜೀವನಾಧಾರವಾಗಿರುವ ಸಾವಿರಾರು ಫಲಾನುಭವಿಗಳು ಹಲವು ತಿಂಗಳಿಂದ ಹಣ ಸಿಗದೇ ಸಂಕಷ್ಟ ಎದುರಿಸುತ್ತಿದ್ದಾರೆ. ವಯೋವೃದ್ಧರು, ವಿಧವೆಯರು ಮತ್ತು ಅಂಗವಿಕಲರಿಗೆ ದಿನನಿತ್ಯದ ಖರ್ಚು ನಿರ್ವಹಿಸುವುದೇ ಕಷ್ಟಕರವಾಗಿದ್ದು, ಸರ್ಕಾರ ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಒತ್ತಾಯಿಸಲಾಗಿದೆ.


ನಕಲಿ ದಾಖಲೆಗಳ ಆಧಾರದ ಮೇಲೆ ಮಾಸಾಶನ ಪಡೆಯುತ್ತಿರುವವರ ವಿರುದ್ಧ ಕ್ರಮ ಕೈಗೊಳ್ಳುವ ಹೆಸರಿನಲ್ಲಿ ಅರ್ಹ ಫಲಾನುಭವಿಗಳ ಮಾಸಾಶನ ಸ್ಥಗಿತಗೊಳಿಸಿರುವುದು ಸರಿಯಲ್ಲ. ತಪ್ಪಿತಸ್ಥರನ್ನು ಪತ್ತೆಹಚ್ಚಿ ಕ್ರಮ ಕೈಗೊಳ್ಳುವ ಬದಲು ಎಲ್ಲ ಫಲಾನುಭವಿಗಳನ್ನೂ ಸಂಕಷ್ಟಕ್ಕೆ ತಳ್ಳಲಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಲಾಗಿದೆ.

ಮಾಸಾಶನ ಸ್ಥಗಿತದಿಂದ ಅನೇಕ ಹಿರಿಯ ನಾಗರಿಕರು ಔಷಧೋಪಚಾರ, ಆಹಾರ ಹಾಗೂ ದಿನನಿತ್ಯದ ಅಗತ್ಯ ವೆಚ್ಚಗಳನ್ನು ಭರಿಸಲು ಪರದಾಡುವಂತಾಗಿದೆ. ಆದ್ದರಿಂದ ಸರ್ಕಾರ ಕೂಡಲೇ ಬಾಕಿ ಉಳಿದಿರುವ ಮಾಸಾಶನವನ್ನು ಬಿಡುಗಡೆ ಮಾಡಿ ಫಲಾನುಭವಿಗಳ ನೆರವಿಗೆ ಬರಬೇಕು. ಇಲ್ಲವಾದಲ್ಲಿ ಉಗ್ರ ಹೋರಾಟ ರೂಪಿಸಲಾಗುವುದು ಎಂದು ಎಚ್ಚರಿಕೆ ನೀಡಲಾಗಿದೆ.

ಮನವಿ ಸಲ್ಲಿಸುವ ಸಂದರ್ಭದಲ್ಲಿ ಕೃಷ್ಣ ಜಾಧವ, ನೀಲಪ್ಪ ತುಳಿ, ಅಡಿವೆಕ್ಕ ರಾಮಗಿರಿ, ವೀರಬಸಯ್ಯ ಮಠಪತಿ, ಇಮಾಮಸಾಬ ಬೈರಕದಾರ, ಜನ್ನತಬಿ ಬೈರಕದಾರ, ಪುಂಡಲೀಕ ಪರಬತ, ವಿನಾಯಕ ಹಾದಿಮನಿ, ಲಕ್ಷ್ಮಣ ತೋಡೇಕಾರ, ಲಕ್ಷ್ಮವ್ವ ಹಾದಿಮನಿ, ಈರಪ್ಪ ಚಿಕ್ಕತೋಟ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**ನಿರುದ್ಯೋಗ, ಬೆಲೆ ಏರಿಕೆ, ರೈತರ ಸಂಕಷ್ಟ, ಜಿಎಸ್‌ಟಿ ಅನ್ಯಾಯ– ಕೇಂದ್ರ ಸರ್ಕಾರದ ವಿರುದ್ಧ ಅಶೋಕ ಮಂದಾಲಿ ವಾಗ್ದಾಳಿ**

# 12 ವರ್ಷಗಳ ಮೋದಿ ಆಡಳಿತ: ಭರವಸೆಗಳ ಬೆಟ್ಟ, ಸಾಧನೆಗಳ ಶೂನ್ಯ



> “ಪ್ರತಿ ವರ್ಷ ಎರಡು ಕೋಟಿ ಉದ್ಯೋಗ, ರೈತರ ಆದಾಯ ದ್ವಿಗುಣ, 15 ಲಕ್ಷ ರೂ. ಜಮೆ, ಬೆಲೆ ನಿಯಂತ್ರಣ ಸೇರಿದಂತೆ ಹಲವು ಭರವಸೆಗಳು ಘೋಷಣೆಯಲ್ಲೇ ಉಳಿದಿವೆ. 12 ವರ್ಷದ ಮೋದಿ ಆಡಳಿತದ ಸಾಧನೆಗಿಂತ ವೈಫಲ್ಯಗಳೇ ಹೆಚ್ಚಾಗಿವೆ.”
>
> – **ಅಶೋಕ ಮಂದಾಲಿ,** ಗದಗ ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷ

■ **ವಿಜಯಸಾಕ್ಷಿ ಸುದ್ದಿ, ಗದಗ**

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರದ 12 ವರ್ಷಗಳ ಆಡಳಿತವು ಸಾಧನೆಗಿಂತ ಸುಳ್ಳು ಭರವಸೆಗಳು, ವೈಫಲ್ಯಗಳು, ಬೆಲೆ ಏರಿಕೆ, ನಿರುದ್ಯೋಗ ಹಾಗೂ ರೈತರ ಸಂಕಷ್ಟಗಳಿಂದಲೇ ಗುರುತಿಸಿಕೊಂಡಿದೆ ಎಂದು ಗದಗ ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷ ಹಾಗೂ ಗದಗ ತಾಲೂಕು ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಈ ಕುರಿತು ಸುದೀರ್ಘ ಪ್ರಕಟಣೆ ನೀಡಿರುವ ಅವರು, “ಗರೀಬ್ ಕಲ್ಯಾಣ್” ಹೆಸರಿನಲ್ಲಿ ಅಧಿಕಾರ ನಡೆಸುತ್ತಿರುವ ಕೇಂದ್ರ ಬಿಜೆಪಿ ಸರ್ಕಾರ ವಾಸ್ತವದಲ್ಲಿ ಕೆಲವೇ ಉದ್ಯಮಿಗಳ ಹಿತಾಸಕ್ತಿಗೆ ಆದ್ಯತೆ ನೀಡಿದ್ದು, ಸಾಮಾನ್ಯ ಜನರ ಬದುಕು ದುಸ್ತರಗೊಳಿಸಿದೆ ಎಂದು ಆರೋಪಿಸಿದರು.

ಪ್ರತಿ ವರ್ಷ ಎರಡು ಕೋಟಿ ಉದ್ಯೋಗ ಸೃಷ್ಟಿ, 2022ರೊಳಗೆ ರೈತರ ಆದಾಯ ದ್ವಿಗುಣ, ಗುಡಿಸಲು ಮುಕ್ತ ಭಾರತ, 100 ಸ್ಮಾರ್ಟ್ ಸಿಟಿಗಳು, ಮೇಕ್ ಇನ್ ಇಂಡಿಯಾ, ಸ್ಕಿಲ್ ಇಂಡಿಯಾ, ಆತ್ಮನಿರ್ಭರ ಭಾರತ, ಎಲ್ಲರಿಗೂ ಆರೋಗ್ಯ ವಿಮೆ, ಜಲ ಜೀವನ್ ಮಿಷನ್ ಸೇರಿದಂತೆ ಅನೇಕ ಯೋಜನೆಗಳು ನಿರೀಕ್ಷಿತ ಗುರಿ ತಲುಪಿಲ್ಲ ಎಂದು ಅವರು ದೂರಿದರು.

ದೇಶದ ಪ್ರತಿಯೊಬ್ಬರ ಬ್ಯಾಂಕ್ ಖಾತೆಗೆ 15 ಲಕ್ಷ ರೂ. ಜಮೆ ಮಾಡುವ ಭರವಸೆ ಸೇರಿದಂತೆ ಹಲವು ಚುನಾವಣಾ ಆಶ್ವಾಸನೆಗಳು ಜನರನ್ನು ಸೆಳೆಯುವ ರಾಜಕೀಯ ಘೋಷಣೆಗಳಾಗಿ ಉಳಿದಿವೆ ಎಂದು ಟೀಕಿಸಿದರು.

ಪ್ರತಿ ವರ್ಷ ಎರಡು ಕೋಟಿ ಉದ್ಯೋಗ ಸೃಷ್ಟಿಸುವ ಭರವಸೆ ನೀಡಿದ್ದ ಕೇಂದ್ರ ಸರ್ಕಾರ ಇಂದು ಲಕ್ಷಾಂತರ ಖಾಲಿ ಹುದ್ದೆಗಳನ್ನು ಭರ್ತಿ ಮಾಡದೇ ಯುವಕರನ್ನು ನಿರುದ್ಯೋಗದ ಅಂಚಿಗೆ ತಳ್ಳಿದೆ ಎಂದು ಆರೋಪಿಸಿದ ಅಶೋಕ ಮಂದಾಲಿ, ಪದವೀಧರ ಯುವಕರಲ್ಲಿ ನಿರುದ್ಯೋಗ ಪ್ರಮಾಣ ಆತಂಕಕಾರಿ ಮಟ್ಟ ತಲುಪಿದೆ ಎಂದು ಹೇಳಿದರು.

ಪೇಪರ್ ಲೀಕ್ ಹಗರಣಗಳು, ಅಗ್ನಿಪಥ್ ಯೋಜನೆ, ಸರ್ಕಾರಿ ನೇಮಕಾತಿಗಳ ವಿಳಂಬ ಹಾಗೂ ಉದ್ಯೋಗಾವಕಾಶಗಳ ಕೊರತೆಯಿಂದ ಯುವಜನತೆ ಭವಿಷ್ಯದ ಬಗ್ಗೆ ಆತಂಕದಲ್ಲಿದೆ ಎಂದು ಹೇಳಿದರು.

ಪೆಟ್ರೋಲ್, ಡೀಸೆಲ್, ಅಡುಗೆ ಅನಿಲ, ಆಹಾರ ವಸ್ತುಗಳು ಸೇರಿದಂತೆ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಜನಜೀವನ ಅಸ್ತವ್ಯಸ್ತವಾಗಿದೆ. ಚುನಾವಣೆ ಮುಗಿದ ತಕ್ಷಣ ಇಂಧನ ಹಾಗೂ ಎಲ್‌ಪಿಜಿ ದರಗಳನ್ನು ಹೆಚ್ಚಿಸುವುದು ಕೇಂದ್ರ ಸರ್ಕಾರದ ರೂಢಿಯಾಗಿದೆ ಎಂದು ಆರೋಪಿಸಿದರು.

2014ಕ್ಕೆ ಹೋಲಿಸಿದರೆ ಇಂದಿನ ಪೆಟ್ರೋಲ್, ಡೀಸೆಲ್ ಹಾಗೂ ಅಡುಗೆ ಅನಿಲ ದರಗಳು ಗಣನೀಯವಾಗಿ ಏರಿಕೆಯಾಗಿದ್ದು, ಸಾಮಾನ್ಯ ವರ್ಗದ ಜನರು ಆರ್ಥಿಕ ಒತ್ತಡಕ್ಕೆ ಸಿಲುಕಿದ್ದಾರೆ ಎಂದು ಹೇಳಿದರು.

2022ರೊಳಗೆ ರೈತರ ಆದಾಯ ದ್ವಿಗುಣಗೊಳಿಸುವ ಭರವಸೆ ಈಡೇರಿಲ್ಲ. ಕನಿಷ್ಠ ಬೆಂಬಲ ಬೆಲೆ (ಎಂಎಸ್‌ಪಿ), ರಸಗೊಬ್ಬರ ದರ ಏರಿಕೆ, ಕೃಷಿ ವೆಚ್ಚ ಹೆಚ್ಚಳ ಹಾಗೂ ಅನುದಾನ ಕಡಿತದಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಅವರು ಆರೋಪಿಸಿದರು.

ರಸಗೊಬ್ಬರ ಸಬ್ಸಿಡಿ ಕಡಿತ ಹಾಗೂ ಕೃಷಿ ಕ್ಷೇತ್ರದ ಮೇಲಿನ ನಿರ್ಲಕ್ಷ್ಯದಿಂದ ರೈತರ ಬದುಕು ಮತ್ತಷ್ಟು ಸಂಕಷ್ಟಕ್ಕೆ ಸಿಲುಕಿದೆ ಎಂದು ದೂರಿದರು.

ಜಿಎಸ್‌ಟಿ ಜಾರಿಯಾದ ನಂತರ ಕರ್ನಾಟಕದಂತಹ ತೆರಿಗೆ ಕೊಡುಗೆ ನೀಡುವ ರಾಜ್ಯಗಳಿಗೆ ಅನ್ಯಾಯವಾಗುತ್ತಿದೆ. ಕರ್ನಾಟಕ ದೇಶದ ಅತಿಹೆಚ್ಚು ತೆರಿಗೆ ಪಾವತಿಸುವ ರಾಜ್ಯಗಳಲ್ಲಿ ಒಂದಾಗಿದ್ದರೂ, ಕೇಂದ್ರದಿಂದ ಮರಳಿ ಸಿಗುವ ಪಾಲು ತೀರಾ ಕಡಿಮೆಯಾಗಿದೆ ಎಂದು ಅವರು ಹೇಳಿದರು.

ಹಣಕಾಸು ಆಯೋಗದ ಶಿಫಾರಸುಗಳು ಹಾಗೂ ಜಿಎಸ್‌ಟಿ ವ್ಯವಸ್ಥೆಯಿಂದ ರಾಜ್ಯದ ಅಭಿವೃದ್ಧಿಗೆ ಅಗತ್ಯವಿರುವ ಸಂಪನ್ಮೂಲಗಳು ಕಡಿಮೆಯಾಗುತ್ತಿವೆ ಎಂದು ಅಶೋಕ ಮಂದಾಲಿ ಆರೋಪಿಸಿದರು.

**ಮೋದಿ ಸರ್ಕಾರದ ಪ್ರಮುಖ ವೈಫಲ್ಯಗಳು**

- ಪ್ರತಿ ವರ್ಷ 2 ಕೋಟಿ ಉದ್ಯೋಗ ಸೃಷ್ಟಿ ಭರವಸೆ ಈಡೇರಿಲ್ಲ
- ರೈತರ ಆದಾಯ ದ್ವಿಗುಣ ಮಾಡುವ ಗುರಿ ವಿಫಲ
- ಪೆಟ್ರೋಲ್, ಡೀಸೆಲ್, ಎಲ್‌ಪಿಜಿ ದರಗಳಲ್ಲಿ ಭಾರೀ ಏರಿಕೆ
- ಮೇಕ್ ಇನ್ ಇಂಡಿಯಾ, ಸ್ಕಿಲ್ ಇಂಡಿಯಾ ಯೋಜನೆಗಳು ನಿರೀಕ್ಷಿತ ಫಲ ನೀಡಿಲ್ಲ
- ನಿರುದ್ಯೋಗ ಪ್ರಮಾಣ ಏರಿಕೆ
- ಕರ್ನಾಟಕಕ್ಕೆ ಜಿಎಸ್‌ಟಿ ಮತ್ತು ತೆರಿಗೆ ಹಂಚಿಕೆಯಲ್ಲಿ ಅನ್ಯಾಯ
- ರೂಪಾಯಿ ಮೌಲ್ಯ ಕುಸಿತ ಹಾಗೂ ಸಾಲದ ಹೊರೆ ಹೆಚ್ಚಳ
- ರಸಗೊಬ್ಬರ ಸಬ್ಸಿಡಿ ಕಡಿತದಿಂದ ರೈತರಿಗೆ ಸಂಕಷ್ಟ
- ಸಣ್ಣ ಕೈಗಾರಿಕೆಗಳು ಮತ್ತು ಸ್ಟಾರ್ಟ್‌ಅಪ್‌ಗಳ ಮೇಲೆ ಆರ್ಥಿಕ ಒತ್ತಡ

**ಆರ್ಥಿಕತೆ ಮತ್ತು ರೂಪಾಯಿ ಮೌಲ್ಯ ಕುಸಿತ**

ದೇಶದ ಆರ್ಥಿಕ ಬೆಳವಣಿಗೆ ದರ ಕುಸಿಯುತ್ತಿದ್ದು, ರೂಪಾಯಿ ಮೌಲ್ಯ ಇತಿಹಾಸದಲ್ಲೇ ಕನಿಷ್ಠ ಮಟ್ಟಕ್ಕೆ ತಲುಪಿದೆ. ದೇಶದ ಸಾಲದ ಪ್ರಮಾಣವೂ ಗಣನೀಯವಾಗಿ ಏರಿಕೆಯಾಗಿದೆ ಎಂದು ಅವರು ಹೇಳಿದರು.

ಕೇಂದ್ರ ಸರ್ಕಾರದ ಆರ್ಥಿಕ ನೀತಿಗಳ ಪರಿಣಾಮವಾಗಿ ಸಣ್ಣ ಕೈಗಾರಿಕೆಗಳು, ಎಂಎಸ್‌ಎಂಇಗಳು ಹಾಗೂ ಸ್ಟಾರ್ಟ್‌ಅಪ್ ಸಂಸ್ಥೆಗಳು ಸಂಕಷ್ಟಕ್ಕೆ ಸಿಲುಕಿವೆ ಎಂದು ದೂರಿದರು. ಕೇಂದ್ರ ಸರ್ಕಾರ ಜನರಿಗೆ ನೀಡಿದ ಭರವಸೆಗಳನ್ನು ಈಡೇರಿಸುವ ಬದಲು ಪ್ರಚಾರ ರಾಜಕಾರಣದಲ್ಲಿ ತೊಡಗಿದೆ. ಜನರ ನೈಜ ಸಮಸ್ಯೆಗಳಿಗೆ ಪರಿಹಾರ ನೀಡುವುದು ಕೇಂದ್ರದ ಮೊದಲ ಆದ್ಯತೆಯಾಗಬೇಕು ಎಂದು ಅಶೋಕ ಮಂದಾಲಿ ಆಗ್ರಹಿಸಿದ್ದಾರೆ.

**ಗದಗ–ಅತ್ತಿಕಟ್ಟಿ ನೂತನ ಬಸ್ ಸೇವೆಗೆ ಚಾಲನೆ; ಪೂಜೆ ಸಲ್ಲಿಸಿ ಸ್ವಾಗತಿಸಿದ ರಾಮಣ್ಣ ಮೇಗಲಮನಿ**

# ಅತ್ತಿಕಟ್ಟಿಗೆ ಬಸ್ ಭಾಗ್ಯ; ಗ್ರಾಮಸ್ಥರ ಸಂಭ್ರಮ

■ **ವಿಜಯಸಾಕ್ಷಿ ಸುದ್ದಿ, ಡಂಬಳ**

ಗದಗ ನಗರದಿಂದ ಕದಾಂಪುರ, ಡೋಣಿ ಹಾಗೂ ಡೋಣಿ ತಾಂಡ ಮಾರ್ಗವಾಗಿ ಅತ್ತಿಕಟ್ಟಿ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ನೂತನ ಬಸ್ ಸೇವೆ ಆರಂಭವಾಗಿದ್ದು, ಗ್ರಾಮಸ್ಥರಲ್ಲಿ ಹರ್ಷದ ವಾತಾವರಣ ಮೂಡಿದೆ.

ಪ್ರತಿದಿನ ಬೆಳಿಗ್ಗೆ 10 ಗಂಟೆಗೆ ಗದಗ ನಗರದಿಂದ ಹೊರಡುವ ಈ ಬಸ್ ಗ್ರಾಮಕ್ಕೆ ಆಗಮಿಸಿದ ವೇಳೆ ಮುಂಡರಗಿ ತಾಲೂಕು ಪಂಚ ಗ್ಯಾರಂಟಿ ಅನುಷ್ಠಾನ ಸಮಿತಿ ಸದಸ್ಯ ರಾಮಣ್ಣ ಮೇಗಲಮನಿ ಅವರು ಬಸ್‌ಗೆ ಪೂಜೆ ಸಲ್ಲಿಸಿ ಸ್ವಾಗತಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಗ್ರಾಮೀಣ ಭಾಗದ ಜನರಿಗೆ ಸುಲಭ ಮತ್ತು ಸುಗಮ ಸಂಚಾರ ವ್ಯವಸ್ಥೆ ಕಲ್ಪಿಸುವ ಉದ್ದೇಶದಿಂದ ರೋಣ ಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ ಹಾಗೂ ಗದಗ ಜಿಲ್ಲಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ ಅವರ ಸಹಕಾರದೊಂದಿಗೆ ಈ ಬಸ್ ಸೇವೆ ಆರಂಭವಾಗಿರುವುದು ಸಂತಸದ ಸಂಗತಿಯಾಗಿದೆ ಎಂದು ಹೇಳಿದರು.

ವಿದ್ಯಾರ್ಥಿಗಳು, ರೈತರು, ವ್ಯಾಪಾರಿಗಳು ಹಾಗೂ ಸಾರ್ವಜನಿಕರಿಗೆ ಗದಗ ನಗರಕ್ಕೆ ತೆರಳಲು ಈ ಸೇವೆ ಅತ್ಯಂತ ಅನುಕೂಲಕರವಾಗಲಿದ್ದು, ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಗೆ ಉತ್ತಮ ಸಾರಿಗೆ ವ್ಯವಸ್ಥೆ ಅಗತ್ಯವಾಗಿದೆ. ಸಾರ್ವಜನಿಕರು ಈ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಅವರು ಮನವಿ ಮಾಡಿದರು.

ಬಸ್ ಸೇವೆ ಆರಂಭಗೊಂಡಿರುವುದಕ್ಕೆ ಗ್ರಾಮಸ್ಥರು ಸಾರಿಗೆ ಇಲಾಖೆಗೆ ಅಭಿನಂದನೆ ಸಲ್ಲಿಸಿ ಸಂತಸ ವ್ಯಕ್ತಪಡಿಸಿದರು.



ಕಾರ್ಯಕ್ರಮದಲ್ಲಿ ಹಾಲನಗೌಡ ಪಾಟೀಲ, ನಿಂಗಪ್ಪ ಮಳ್ಳಣ್ಣವರ, ನಿಂಗಪ್ಪ ಮೂಲಿಮನಿ, ಕೆಂಚಪ್ಪ ಪೀಚಿ, ಹನಮಪ್ಪ ಗೋಡಿ, ಶೇಕಪ್ಪ ಗುಡ್ಡದ, ಸಿದ್ಧನಗೌಡ ಜಾಯನಗೌಡರ, ಸಿದ್ಧಪ್ಪ ಹಿತ್ತಲಮನಿ, ಹನಮಪ್ಪ ಯಲಸೂರ, ಥಾವರೇಪ್ಪ ನಾಯಕ, ಪರಸಪ್ಪ ಪೀಚಿ, ನಿಂಗಪ್ಪ ಕಲ್ಯಾಣದವರ, ಪರಸಪ್ಪ ಹರಕೇರಿ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

**ಮಲೇಶಿಯಾದಲ್ಲಿ ನಡೆದ ವರ್ಲ್ಡ್ ಫ್ಯಾಶನ್ ಸಮ್ಮಿಟ್‌ನಲ್ಲಿ ಗೌರವ ಡಾಕ್ಟರೇಟ್**

# ಗದಗದ ಕವಿತಾಗೆ ಅಂತಾರಾಷ್ಟ್ರೀಯ ಗೌರವ

■ **ವಿಜಯಸಾಕ್ಷಿ ಸುದ್ದಿ, ಗದಗ**



ಆರಿ ವರ್ಕ್ ಕೌಶಲ್ಯದ ಮೂಲಕ ನೂರಾರು ಮಹಿಳೆಯರ ಬದುಕಿಗೆ ಹೊಸ ಬೆಳಕು ನೀಡಿರುವ ಗದಗದ ಭಾರ್ಗವಿ ಮಹಿಳಾ ಫೌಂಡೇಶನ್ ಸಂಸ್ಥಾಪಕಿ ಕವಿತಾ ಕೊಣ್ಣೂರ ಅವರಿಗೆ ಅಂತಾರಾಷ್ಟ್ರೀಯ ಮಟ್ಟದಲ್ಲಿ ಗೌರವ ದೊರೆತಿದೆ. ಇತ್ತೀಚೆಗೆ ಮಲೇಶಿಯಾದಲ್ಲಿ ನಡೆದ ಘಾಂಡಿಟಜ ಈಛ್ಘುಂಟಿ ವರ್ಲ್ಡ್ ಫ್ಯಾಷನ್ ಸಮ್ಮಿಟ್ 2026 ಕಾರ್ಯಕ್ರಮದಲ್ಲಿ ಉಗಾಂಡಾದ ಘಾಂಡಿಟಜ ವರ್ಲ್ಡ್ ಫ್ಯಾಷನ್ ವಿಶ್ವವಿದ್ಯಾಲಯ ವತಿಯಿಂದ ಗೌರವ ಡಾಕ್ಟರೇಟ್ ಪ್ರದಾನ ಮಾಡಿ ಸನ್ಮಾನಿಸಲಾಗಿದೆ.

ಆರಿ ವರ್ಕ್ ಕ್ಷೇತ್ರದಲ್ಲಿ ವಿಶಿಷ್ಟ ಸಾಧನೆ ಮಾಡುವುದರ ಜೊತೆಗೆ ಮಹಿಳೆಯರನ್ನು ಆರ್ಥಿಕವಾಗಿ ಸ್ವಾವಲಂಬಿಗಳನ್ನಾಗಿಸಲು ಶ್ರಮಿಸಿರುವ ಕವಿತಾ ಕೊಣ್ಣೂರ ಅವರ ಸೇವೆಯನ್ನು ಗುರುತಿಸಿ ಈ ಅಂತಾರಾಷ್ಟ್ರೀಯ ಗೌರವ ನೀಡಲಾಗಿದೆ.

ಕೇವಲ ತರಬೇತಿ ನೀಡುವುದಷ್ಟೇ ಅಲ್ಲದೆ, ತಮ್ಮನ್ನು ಅರಸಿ ಬರುವ ಮಹಿಳೆಯರಿಗೆ ಮಾರ್ಗದರ್ಶಕಿಯಾಗಿ, ಅಕ್ಕನ ಸ್ಥಾನದಲ್ಲಿ ನಿಂತು ಆತ್ಮವಿಶ್ವಾಸ ತುಂಬುವ ಕಾರ್ಯವನ್ನು ಕವಿತಾ ನಿರಂತರವಾಗಿ ಮಾಡುತ್ತಿದ್ದಾರೆ. ಆರಿ ವರ್ಕ್ ಮೂಲಕ ಅನೇಕ ಮಹಿಳೆಯರು ಸ್ವಂತ ಉದ್ಯೋಗ ಆರಂಭಿಸಿ ಆರ್ಥಿಕ ಸ್ವಾವಲಂಬನೆ ಸಾಧಿಸಿದ್ದಾರೆ.

ಸಾಮಾಜಿಕ ಸೇವೆ ಯಲ್ಲಿಯೂ ಸಕ್ರಿಯವಾಗಿ ತೊಡಗಿಸಿಕೊಂಡಿರುವ ಕವಿತಾ ಕೊಣ್ಣೂರ, ಮಹಿಳಾ ಸಬಲೀಕರಣದ ನಿಟ್ಟಿನಲ್ಲಿ ಹಲವು ಕಾರ್ಯಕ್ರಮಗಳನ್ನು ರೂಪಿಸಿ ಯಶಸ್ವಿಯಾಗಿ ಅನುಷ್ಠಾನಗೊಳಿಸಿದ್ದಾರೆ.

ಮಲೇಶಿಯಾದಲ್ಲಿ ನಡೆದ ಅಂತಾರಾಷ್ಟ್ರೀಯ ಕಾರ್ಯಕ್ರಮದಲ್ಲಿ ವಿವಿಧ ದೇಶಗಳ ಗಣ್ಯರು, ಸಮಾಜಸೇವಕರು ಹಾಗೂ ವಿವಿಧ ಕ್ಷೇತ್ರಗಳ ಪ್ರತಿನಿಧಿಗಳು ಭಾಗವಹಿಸಿದ್ದರು. ಈ ವೇಳೆ ಗೌರವ ಸ್ವೀಕರಿಸಿದ ಕವಿತಾ ಕೊಣ್ಣೂರ, ಈ ಪ್ರಶಸ್ತಿ ತನ್ನ ಜವಾಬ್ದಾರಿಯನ್ನು ಇನ್ನಷ್ಟು ಹೆಚ್ಚಿಸಿದ್ದು, ಸಮಾಜ ಸೇವೆಯಲ್ಲಿ ಮತ್ತಷ್ಟು ತೊಡಗಿಸಿಕೊಳ್ಳಲು ಪ್ರೇರಣೆ ನೀಡಿದೆ ಎಂದು ಸಂತಸ ವ್ಯಕ್ತಪಡಿಸಿದರು.

> “ಇದು ನನ್ನೊಬ್ಬಳ ಸಾಧನೆಯಲ್ಲ. ನನ್ನ ಕುಟುಂಬ, ಗುರುಗಳು, ಸ್ನೇಹಿತರು ಹಾಗೂ ನನ್ನನ್ನು ಬೆಂಬಲಿಸಿದ ಎಲ್ಲರ ಆಶೀರ್ವಾದದ ಫಲ. ಈ ಗೌರವ ನನ್ನ ಸಾಮಾಜಿಕ ಸೇವೆಗೆ ಮತ್ತಷ್ಟು ಪ್ರೇರಣೆ ನೀಡಿದೆ.”
>
> – **ಕವಿತಾ ಕೊಣ್ಣೂರ,** ಸಂಸ್ಥಾಪಕಿ, ಭಾರ್ಗವಿ ಮಹಿಳಾ ಫೌಂಡೇಶನ್

**ಜಿಲ್ಲೆಗೆ ಹೆಮ್ಮೆಯ ಕ್ಷಣ**

ಗದಗ ಜಿಲ್ಲೆಯ ಮಹಿಳಾ ಪ್ರತಿಭೆಯೊಬ್ಬರಿಗೆ ಅಂತಾರಾಷ್ಟ್ರೀಯ ಮಟ್ಟದಲ್ಲಿ ದೊರೆತ ಈ ಗೌರವ ಜಿಲ್ಲೆಯ ಹೆಮ್ಮೆಯನ್ನು ಮತ್ತಷ್ಟು ಹೆಚ್ಚಿಸಿದೆ. ಕವಿತಾ ಕೊಣ್ಣೂರ ಅವರ ಸಾಧನೆಗೆ ವಿವಿಧ ಸಂಘ–ಸಂಸ್ಥೆಗಳು, ಸಮಾಜಮುಖಿ ಸಂಘಟನೆಗಳು ಹಾಗೂ ಅವರ ವಿದ್ಯಾರ್ಥಿಗಳು ಅಭಿನಂದನೆ ಸಲ್ಲಿಸಿದ್ದಾರೆ.

**ಸಾವಯವ–ನೈಸರ್ಗಿಕ ಕೃಷಿಯೇ ಸುಸ್ಥಿರ ಭವಿಷ್ಯದ ದಾರಿ**

# ಮಣ್ಣು ಉಳಿಸಿ, ಕೃಷಿ ಉಳಿಸಿ!

■ **ವಿಜಯಸಾಕ್ಷಿ ಸುದ್ದಿ, ಗದಗ**

ಮಣ್ಣಿನ ಫಲವತ್ತತೆ ಕಾಪಾಡಿ ಕೃಷಿಯನ್ನು ಸುಸ್ಥಿರಗೊಳಿಸುವ ಉದ್ದೇಶದಿಂದ ಐಸಿಎಆರ್–ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರ, ಹುಲಕೋಟಿ ಹಾಗೂ ಕೃಷಿ ಇಲಾಖೆ, ಗದಗ ಸಹಯೋಗದಲ್ಲಿ ಹಮ್ಮಿಕೊಂಡಿರುವ ಖೇತ್ ಬಚಾವೋ ಅಭಿಯಾನಕ್ಕೆ ಡ.ಸ.ರಾಮೇನಹಳ್ಳಿಯಲ್ಲಿ ಚಾಲನೆ ನೀಡಲಾಯಿತು.



ಜಿಲ್ಲಾ ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ ಸಸಿಗೆ ನೀರೆರೆಯುವ ಮೂಲಕ ಅಭಿಯಾನ ಉದ್ಘಾಟಿಸಿ ಮಾತನಾಡಿ, ಯೂರಿಯಾ, ಡಿಎಪಿ ಸೇರಿದಂತೆ ವಿವಿಧ ರಾಸಾಯನಿಕ ಗೊಬ್ಬರಗಳ ತಯಾರಿಕೆಗೆ ಅಗತ್ಯ ಕಚ್ಚಾ ವಸ್ತುಗಳ ಕೊರತೆಯಿಂದ ಮುಂದಿನ ದಿನಗಳಲ್ಲಿ ಗೊಬ್ಬರಗಳ ಲಭ್ಯತೆ ಕಡಿಮೆಯಾಗುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿ ರೈತರು ಮಣ್ಣಿನ ಪರೀಕ್ಷೆ ಆಧರಿಸಿ ಗೊಬ್ಬರ ಬಳಕೆ ಮಾಡುವುದರ ಜೊತೆಗೆ ಸಾವಯವ ಪರ್ಯಾಯಗಳತ್ತ ಹೆಚ್ಚಿನ ಗಮನ ಹರಿಸಬೇಕು ಎಂದು ಸಲಹೆ ನೀಡಿದರು.

ರಾಸಾಯನಿಕ ಗೊಬ್ಬರಗಳ ನಿರಂತರ ಮತ್ತು ಅತಿಯಾದ ಬಳಕೆಯಿಂದ ಮಣ್ಣಿನ ಗುಣಮಟ್ಟ ಕುಸಿಯುತ್ತಿದ್ದು, ಬೆಳೆಗಳ ಇಳುವರಿಯ ಮೇಲೂ ಪ್ರತಿಕೂಲ ಪರಿಣಾಮ ಬೀರುತ್ತಿದೆ. ಹಸಿರೆಲೆ ಗೊಬ್ಬರ, ಕೊಟ್ಟಿಗೆ ಗೊಬ್ಬರ, ಎರೆಹುಳು ಗೊಬ್ಬರ ಸೇರಿದಂತೆ ಸಾವಯವ ಪರಿಕರಗಳ ಬಳಕೆಯಿಂದ ಮಣ್ಣಿನ ಆರೋಗ್ಯ ಕಾಪಾಡಿ ಉತ್ತಮ ಇಳುವರಿ ಪಡೆಯಬಹುದು ಎಂದು ಹೇಳಿದರು.

> “ರಾಸಾಯನಿಕ ಗೊಬ್ಬರಗಳ ಅತಿಯಾದ ಬಳಕೆಯಿಂದ ಮಣ್ಣಿನ ಆರೋಗ್ಯ ಹದಗೆಡುತ್ತಿದೆ. ಸಾವಯವ ಹಾಗೂ ನೈಸರ್ಗಿಕ ಕೃಷಿಯ ಮೂಲಕ ಮಣ್ಣನ್ನು ಸಂರಕ್ಷಿಸುವುದು ಇಂದಿನ ಅಗತ್ಯ.”
>
> – **ಚೇತನಾ ಪಾಟೀಲ,** ಜಿಲ್ಲಾ ಜಂಟಿ ಕೃಷಿ ನಿರ್ದೇಶಕಿ

ಮುಂಡರಗಿ ಸಹಾಯಕ ಕೃಷಿ ನಿರ್ದೇಶಕ ಡಾ. ಪ್ರಣೇಶ ಹಾದಿಮನಿ ಮಾತನಾಡಿ, ಮಣ್ಣು ಜೀವಂತ ಸಂಪನ್ಮೂಲವಾಗಿದ್ದು, ಅದರಲ್ಲಿರುವ ಉಪಯುಕ್ತ ಸೂಕ್ಷ್ಮಾಣು ಜೀವಿಗಳ ಸಂರಕ್ಷಣೆ ಅತ್ಯಗತ್ಯವಾಗಿದೆ. ಸಾವಯವ ಹಾಗೂ ನೈಸರ್ಗಿಕ ಕೃಷಿಯತ್ತ ರೈತರು ಮುಖ ಮಾಡದಿದ್ದರೆ ಭೂಮಿ ಬರಡಾಗುವ ಅಪಾಯವಿದೆ ಎಂದು ಎಚ್ಚರಿಸಿದರು.

ಕೃಷಿ ವಿಜ್ಞಾನ ಕೇಂದ್ರದ ಬೇಸಾಯ ಶಾಸ್ತ್ರ ವಿಜ್ಞಾನಿ ಡಾ. ಚೇತನ ಬಾಬು ಆರ್.ಟಿ. ಹೆಸರು, ಉದ್ದು, ಸೂರ್ಯಕಾಂತಿ ಹಾಗೂ ಕಡಲೆ ಬೆಳೆಗಳ ವೈಜ್ಞಾನಿಕ ಬೇಸಾಯ ಪದ್ಧತಿ ಮತ್ತು ಕೀಟ–ರೋಗಗಳ ಹತೋಟಿಗೆ ಕಡಿಮೆ ವೆಚ್ಚದ ತಂತ್ರಜ್ಞಾನಗಳ ಕುರಿತು ರೈತರಿಗೆ ಮಾಹಿತಿ ನೀಡಿದರು.

ಕೃಷಿ ವಿಸ್ತರಣೆ ವಿಜ್ಞಾನಿ ಡಾ. ಮಂಜುಪ್ರಕಾಶ ಪಾಟೀಲ ‘ಖೇತ್ ಬಚಾವೋ ಅಭಿಯಾನ’ದ ಮಹತ್ವವನ್ನು ವಿವರಿಸಿ, ಸಾವಯವ ಮತ್ತು ನೈಸರ್ಗಿಕ ಕೃಷಿ ನಮ್ಮ ಸಂಪ್ರದಾಯದ ಭಾಗವಾಗಿದ್ದು, ಇಂದಿನ ಪರಿಸ್ಥಿತಿಯಲ್ಲಿ ಮತ್ತೆ ಅದರತ್ತ ಮರಳುವ ಅಗತ್ಯವಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕೃಷಿ ಅಧಿಕಾರಿಗಳು, ಕೃಷಿ ಸಖಿಯರು, ರೈತರು ಹಾಗೂ ರೈತ ಮಹಿಳೆಯರು ಸೇರಿದಂತೆ 120ಕ್ಕೂ ಹೆಚ್ಚು ಮಂದಿ ಭಾಗವಹಿಸಿದ್ದರು.

ಐಎಂಎ ಶತಮಾನೋತ್ಸವ ಅಂಗವಾಗಿ ಜೂನ್ 16ರಂದು ಜಿಲ್ಲಾಮಟ್ಟದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಗೌರವ

## ಟಾಪರ್‌ಗಳಿಗೆ ಶತಮಾನದ ಸನ್ಮಾನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆಗೈದ ವಿದ್ಯಾರ್ಥಿಗಳನ್ನು ಗುರುತಿಸಿ ಗೌರವಿಸುವ ಉದ್ದೇಶದಿಂದ ಭಾರತೀಯ ವೈದ್ಯಕೀಯ ಸಂಘ (ಐಎಂಎ) ಗದಗ ಘಟಕವು ತನ್ನ ಶತಮಾನೋತ್ಸವ ಆಚರಣೆಯ ಅಂಗವಾಗಿ ವಿಶೇಷ ಸನ್ಮಾನ ಸಮಾರಂಭವನ್ನು ಆಯೋಜಿಸಿದೆ.

ಜಿಲ್ಲಾಡಳಿತ ಗದಗ ಹಾಗೂ ಶಾಲಾ ಶಿಕ್ಷಣ ಇಲಾಖೆಯ ಸಹಯೋಗದಲ್ಲಿ ನಡೆಯಲಿರುವ ಈ ಕಾರ್ಯಕ್ರಮವು ಜೂನ್ 16ರಂದು ಸಂಜೆ 4 ಗಂಟೆಗೆ ನಗರದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿರುವ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜರುಗಲಿದೆ. 2026ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಜಿಲ್ಲೆಯಲ್ಲಿ ಅಗ್ರಸ್ಥಾನ ಪಡೆದ ವಿದ್ಯಾರ್ಥಿಗಳನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಿ ಪ್ರೋತ್ಸಾಹಿಸಲಾಗುವುದು.

ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಉದ್ಘಾಟಿಸಲಿದ್ದು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಹಂಗಾಮಿ ಕುಲಪತಿ ಹಾಗೂ ಕುಲಸಚಿವ ಪ್ರೊ. ಡಾ. ಸುರೇಶ್ ವಿ. ನಾಡಗೌಡರ ಮತ್ತು ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್.ಎಸ್. ಬುರಡಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಐಎಂಎ ಗದಗ ಶತಮಾನೋತ್ಸವ ಸಮಿತಿ ಅಧ್ಯಕ್ಷ ಡಾ. ಎಸ್.ಆರ್. ನಾಗನೂರ ಅಧ್ಯಕ್ಷತೆ ವಹಿಸಲಿದ್ದಾರೆ. ಐಎಂಎ ಗದಗ ಅಧ್ಯಕ್ಷ ಡಾ. ಶ್ರೀಧರ ವಿ. ಕುರಡಗಿ, ಶತಮಾನೋತ್ಸವ ಸಮಿತಿ ಕಾರ್ಯದರ್ಶಿ ಡಾ. ಪವನ್ ಪಾಟೀಲ ಹಾಗೂ ಐಎಂಎ ಕಾರ್ಯದರ್ಶಿ ಡಾ. ರಾಹುಲ್ ಶಿರೋಳ ಕಾರ್ಯಕ್ರಮದ ಆಯೋಜನೆಯಲ್ಲಿ ತೊಡಗಿಸಿಕೊಂಡಿದ್ದಾರೆ.

ಜಿಲ್ಲೆಯ ಪ್ರತಿಭಾವಂತ ವಿದ್ಯಾರ್ಥಿಗಳ ಸಾಧನೆಯನ್ನು ಸಾರ್ವಜನಿಕವಾಗಿ ಗುರುತಿಸಿ ಗೌರವಿಸುವ ಮೂಲಕ ಶಿಕ್ಷಣ ಕ್ಷೇತ್ರಕ್ಕೆ ಮತ್ತಷ್ಟು ಉತ್ತೇಜನ ನೀಡುವುದು ಹಾಗೂ ವಿದ್ಯಾರ್ಥಿಗಳಲ್ಲಿ ಉನ್ನತ ಗುರಿ ಸಾಧಿಸುವ ಸ್ಫೂರ್ತಿ ತುಂಬುವುದು ಕಾರ್ಯಕ್ರಮದ ಉದ್ದೇಶವಾಗಿದೆ.

ಶಿಕ್ಷಣಾಭಿಮಾನಿಗಳು, ಪಾಲಕರು, ಶಿಕ್ಷಕರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ವಿದ್ಯಾರ್ಥಿಗಳನ್ನು ಅಭಿನಂದಿಸಿ ಪ್ರೋತ್ಸಾಹಿಸುವಂತೆ ಐಎಂಎ ಗದಗ ಘಟಕ ಪ್ರಕಟಣೆಯಲ್ಲಿ ಕೋರಿದೆ.

ಬಾಲ ಕಾರ್ಮಿಕ ಪದ್ಧತಿ ವಿರುದ್ಧ ಹೋರಾಟಕ್ಕೆ ಸಾರ್ವಜನಿಕರು ಕೈಜೋಡಿಸಲು ಡಿಸಿ ಸಿ.ಎನ್. ಶ್ರೀಧರ್ ಕರೆ

# ಮಕ್ಕಳ ಭವಿಷ್ಯ ಕಸಿಯುವುದು ಮಹಾಪರಾಧ

■ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳನ್ನು ದುಡಿಮೆಗೆ ತಳ್ಳುವುದು ಕೇವಲ ಕಾನೂನುಬಾಹಿರ ಕೃತ್ಯವಲ್ಲ, ಅದು ಅವರ ಭವಿಷ್ಯ ಕಸಿಯುವ ಸಾಮಾಜಿಕ ಅನ್ಯಾಯವಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲ ಕಾರ್ಮಿಕ ನಿರ್ಮೂಲನಾ ಯೋಜನಾ ಸೊಸೈಟಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ಆಯೋಜಿಸಿದ್ದ ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶಿಕ್ಷಣ ಪಡೆಯಬೇಕಾದ ವಯಸ್ಸಿನಲ್ಲಿ ಮಕ್ಕಳು ದುಡಿಮೆಗೆ ಇಳಿಯುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಪ್ರತಿಯೊಬ್ಬ ಮಗುವಿಗೂ ಶಿಕ್ಷಣ, ಉತ್ತಮ ಮೌಲ್ಯಗಳು ಮತ್ತು ಸುರಕ್ಷಿತ ಬಾಲ್ಯ ಸಿಗಬೇಕು. ಬಾಲ ಕಾರ್ಮಿಕತೆ ಕಂಡು ಬಂದರೆ ಸಾರ್ವಜನಿಕರು ತಕ್ಷಣ ಸಂಬಂಧಿತ ಅಧಿಕಾರಿಗಳ ಗಮನಕ್ಕೆ ತರಬೇಕು ಎಂದು ಜಿಲ್ಲಾಧಿಕಾರಿ ಕರೆ ನೀಡಿದರು.



ಕಾರ್ಯಕ್ರಮ ಉದ್ಘಾಟಿಸಿದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡರ, ಶಿಕ್ಷಣವು ಪ್ರತಿಯೊಬ್ಬ ಮಗುವಿನ ಮೂಲಭೂತ ಹಕ್ಕು ಎಂದು ಪ್ರತಿಪಾದಿಸಿದರು. ಶಿಕ್ಷಣದಿಂದ ದೂರವಾದ ಮಕ್ಕಳು ಬಾಲ ಕಾರ್ಮಿಕತೆ, ಅಪರಾಧ ಚಟುವಟಿಕೆಗಳು ಹಾಗೂ ಮಾದಕ ವ್ಯಸನಗಳಂತಹ ಅನಿಷ್ಟಗಳತ್ತ ಸೆಳೆಯಲ್ಪಡುವ ಅಪಾಯವಿದೆ ಎಂದು ಎಚ್ಚರಿಸಿದರು.

ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಜಯದೇವಿ ಅಂದಪ್ಪ ಕವಲೂರು ಮಾತನಾಡಿ, ಬಡತನ ಮತ್ತು ಅನಕ್ಷರತೆ ಬಾಲ ಕಾರ್ಮಿಕತೆಗೆ ಪ್ರಮುಖ ಕಾರಣಗಳಾಗಿವೆ. ಮಕ್ಕಳನ್ನು ಶಾಲೆಗೆ ಕಳುಹಿಸುವ ಜವಾಬ್ದಾರಿ ಪಾಲಕರ ಮೇಲಿದೆ. ಎಲ್ಲಿಯಾದರೂ ಬಾಲ ಕಾರ್ಮಿಕತೆ ಕಂಡುಬಂದರೆ ಮಕ್ಕಳ ಸಹಾಯವಾಣಿ 1098ಕ್ಕೆ ಮಾಹಿತಿ ನೀಡಬೇಕು ಎಂದು ತಿಳಿಸಿದರು.

> "ಮಕ್ಕಳನ್ನು ಬಾಲ ಕಾರ್ಮಿಕರನ್ನಾಗಿ ಮಾಡದಂತೆ ತಡೆಯುವುದು ಪ್ರತಿಯೊಬ್ಬರ ಸಾಮಾಜಿಕ ಜವಾಬ್ದಾರಿ."
> – ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ

ಕಾರ್ಯಕ್ರಮದಲ್ಲಿ ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆ, ಮಕ್ಕಳ ಶಿಕ್ಷಣದ ಹಕ್ಕು, ಮಕ್ಕಳ ಸುರಕ್ಷತೆ ಹಾಗೂ ಮಾದಕ ವ್ಯಸನ ನಿಯಂತ್ರಣ ಕುರಿತು ಜಾಗೃತಿ ಮೂಡಿಸಲಾಯಿತು. ಇದೇ ವೇಳೆ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಹಟ್ಟಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ರಾಧಾ ಮಣ್ಣೂರ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಬಿಡಿಸಲು ಬಂದ ಕಾನ್‌ಸ್ಟೇಬಲ್ ಮೇಲೂ ಹಲ್ಲೆ, ಐವರು ಜೈಲುಪಾಲು

## ಪೊಲೀಸರ ಎದುರೇ ಪುಡಿರೌಡಿಗಳ ಪುಂಡಾಟ





■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಧೋಬಿಘಾಟ್ ಸಮೀಪದ ಬಾರ್‌ವೊಂದರ ಮುಂದೆ ಕ್ಷುಲ್ಲಕ ವಿಚಾರಕ್ಕೆ ಐವರು ಯುವಕರು ಪರಸ್ಪರ ಹೊಡೆದಾಡಿಕೊಂಡಿದ್ದು, ಗಲಾಟೆ ಬಿಡಿಸಲು ಮುಂದಾದ ಪೊಲೀಸ್ ಕಾನ್‌ಸ್ಟೇಬಲ್ ಮೇಲೆಯೂ ಹಲ್ಲೆ ನಡೆಸಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಐವರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಮೂಲಗಳ ಪ್ರಕಾರ, ಸಣ್ಣ ವಿಚಾರಕ್ಕೆ ಆರಂಭವಾದ ವಾಗ್ವಾದ ಕೆಲವೇ ಕ್ಷಣಗಳಲ್ಲಿ ಕೈಕೈ ಮಿಲಾಯಿಸುವ ಹಂತಕ್ಕೆ ತಲುಪಿದೆ. ರಸ್ತೆಯ ಮಧ್ಯದಲ್ಲೇ ಯುವಕರು ಹೊಡೆದಾಡಿಕೊಂಡ ಪರಿಣಾಮ ಸ್ಥಳದಲ್ಲಿ ಜನರು ಜಮಾಯಿಸಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು.

ಈ ವೇಳೆ ಅಲ್ಲಿಂದ ತೆರಳುತ್ತಿದ್ದ ಕರ್ತವ್ಯದಲ್ಲಿರದ ಪೊಲೀಸ್ ಕಾನ್‌ಸ್ಟೇಬಲ್ ಅಶೋಕ್ ಪಾಟೀಲ್ ಘಟನೆ ಗಮನಿಸಿ ತಕ್ಷಣ ಮಧ್ಯಪ್ರವೇಶಿಸಿದ್ದಾರೆ. ಸಾರ್ವಜನಿಕ ಶಾಂತಿ ಕಾಪಾಡುವ ಉದ್ದೇಶದಿಂದ ಎರಡು ಗುಂಪುಗಳನ್ನು ಸಮಾಧಾನಪಡಿಸಲು ಯತ್ನಿಸಿದರೂ, ಪುಡಿರೌಡಿಗಳು ಗಲಾಟೆ ನಿಲ್ಲಿಸುವ ಬದಲು ಅವರನ್ನೇ ನೂಕಾಡಿ ಹಲ್ಲೆ ನಡೆಸಿದ್ದಾರೆ. ಘಟನೆಯಲ್ಲಿ ಕಾನ್‌ಸ್ಟೇಬಲ್‌ಗೆ ಸಣ್ಣ ಪ್ರಮಾಣದ ಗಾಯಗಳಾಗಿವೆ. ಆದಾಗ್ಯೂ, ಅವರು ಸಮಯಪ್ರಜ್ಞೆ ಮೆರೆದು ಪರಿಸ್ಥಿತಿ ಮತ್ತಷ್ಟು ವಿಕೋಪಕ್ಕೆ ತಿರುಗದಂತೆ ತಡೆಯುವಲ್ಲಿ ಯಶಸ್ವಿಯಾಗಿದ್ದಾರೆ.

ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆ ಗದಗ ಗ್ರಾಮೀಣ ಠಾಣೆ ಪೊಲೀಸರು ಸ್ಥಳಕ್ಕೆ ಧಾವಿಸಿ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತಂದಿದ್ದಾರೆ. ಗಲಾಟೆಯಲ್ಲಿ ಭಾಗಿಯಾಗಿದ್ದ ಐವರು ಆರೋಪಿಗಳನ್ನು ವಶಕ್ಕೆ ಪಡೆದು ಠಾಣೆಗೆ ಕರೆದೊಯ್ದು ವಿಚಾರಣೆ ನಡೆಸಲಾಗಿದೆ. ಬಳಿಕ ಪೊಲೀಸ್ ಸಿಬ್ಬಂದಿ ಮೇಲೆ ಹಲ್ಲೆ ನಡೆಸಿದ ಹಾಗೂ ಸಾರ್ವಜನಿಕ ಶಾಂತಿ ಭಂಗಗೊಳಿಸಿದ ಆರೋಪದಡಿ ಪ್ರಕರಣ ದಾಖಲಿಸಿ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದ್ದು, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಈ ಕುರಿತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಮಾಹಿತಿ ನೀಡಿದ್ದು, ಪೊಲೀಸ್ ಸಿಬ್ಬಂದಿ ಮೇಲೆ ಹಲ್ಲೆ ನಡೆಸುವ ಹಾಗೂ ಸಾರ್ವಜನಿಕ ಶಾಂತಿ ಭಂಗಗೊಳಿಸುವವರ ವಿರುದ್ಧ ಕಠಿಣ ಕ್ರಮ ಮುಂದುವರಿಯಲಿದೆ ಎಂದು ಎಚ್ಚರಿಕೆ ನೀಡಿದ್ದಾರೆ.

ಇದೇ ವೇಳೆ, ಘಟನೆಯ ದೃಶ್ಯಗಳನ್ನು ಸ್ಥಳೀಯರು ತಮ್ಮ ಮೊಬೈಲ್‌ಗಳಲ್ಲಿ ಸೆರೆಹಿಡಿದಿದ್ದು, ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ಪೊಲೀಸರ ಸಮ್ಮುಖದಲ್ಲೇ ನಡೆದ ಈ ಪುಂಡಾಟ ಸಾರ್ವಜನಿಕ ವಲಯದಲ್ಲಿ ವ್ಯಾಪಕ ಚರ್ಚೆಗೆ ಗ್ರಾಸವಾಗಿದೆ.

ಕರ್ತವ್ಯದಲ್ಲಿರದಿದ್ದರೂ ಧೈರ್ಯ, ಸಮಯಪ್ರಜ್ಞೆ ಹಾಗೂ ಕರ್ತವ್ಯನಿಷ್ಠೆ ಮೆರೆದು ಗಲಾಟೆಯನ್ನು ನಿಯಂತ್ರಣಕ್ಕೆ ತಂದ ಕಾನ್‌ಸ್ಟೇಬಲ್ ಅಶೋಕ್ ಪಾಟೀಲ್ ಅವರ ಕಾರ್ಯಕ್ಕೆ ಪೊಲೀಸ್ ಇಲಾಖೆಯ ಹಿರಿಯ ಅಧಿಕಾರಿಗಳು ಹಾಗೂ ಸಾರ್ವಜನಿಕರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಏಷ್ಯನ್ ಚಾಂಪಿಯನ್‌ಶಿಪ್‌ನಲ್ಲಿ ಗದಗದ ರಾಹುಲ್, ಉಳವೇಶ ಸಾಧನೆ; ಭಾರತಕ್ಕೆ ಎರಡು ಚಿನ್ನದ ಪದಕ

# ತಾಂಡಾದ ಯುವಕರಿಂದ ದೇಶಕ್ಕೆ ಚಿನ್ನದ ಕಿರೀಟ

■ವಿಜಯಸಾಕ್ಷಿ ಸುದ್ದಿ, ಗದಗ

ಭೂತಾನ್‌ನಲ್ಲಿ ನಡೆದ ಏಷ್ಯನ್ ಆಟ್ಯಾಪಟ್ಯಾ ಚಾಂಪಿಯನ್‌ಶಿಪ್‌ನಲ್ಲಿ ಗದಗ ಜಿಲ್ಲೆಯ ಇಬ್ಬರು ಯುವ ಕ್ರೀಡಾಪಟುಗಳು ಚಿನ್ನದ ಪದಕ ಗೆದ್ದು ಭಾರತಕ್ಕೆ ಕೀರ್ತಿ ತಂದು-ಕೊಟ್ಟಿದ್ದು, ಜಿಲ್ಲೆಯ ಕ್ರೀಡಾ ಇತಿಹಾಸದಲ್ಲಿ ಮತ್ತೊಂದು ಸುವರ್ಣ ಅಧ್ಯಾಯ ಬರೆದಿದ್ದಾರೆ.

ಅಂತರರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮೆರೆದ ಮುಂಡರಗಿ ತಾಲೂಕಿನ ಶಿಂಗಟರಾಯನಕೇರಿ ತಾಂಡಾದ ರಾಹುಲ್ ಶೇಖರ್ ಕಾರಭಾರಿ ಹಾಗೂ ಶಿರಹಟ್ಟಿ ತಾಲೂಕಿನ ದೇವಿಹಾಳ ತಾಂಡಾದ ಉಳವೇಶ ಶಿವಾಜಿ ಲಮಾಣಿ ಅವರನ್ನು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ಜಿಲ್ಲಾಡಳಿತ ಭವನದಲ್ಲಿ ಸನ್ಮಾನಿಸಿ ಅಭಿನಂದಿಸಿದರು.

ಜೂನ್ 7ರಿಂದ 10ರವರೆಗೆ ಭೂತಾನ್‌ನಲ್ಲಿ ನಡೆದ 3ನೇ ಸೀನಿಯರ್ ಏಷ್ಯನ್ ಆಟ್ಯಾಪಟ್ಯಾ ಚಾಂಪಿಯನ್‌ಶಿಪ್ನಲ್ಲಿ ಭಾರತೀಯ ತಂಡವನ್ನು ಪ್ರತಿನಿಧಿಸಿದ್ದ ರಾಹುಲ್ ಶೇಖರ್ ಕಾರಭಾರಿ ಅವರು ಅತ್ಯುತ್ತಮ ಪ್ರದರ್ಶನ ನೀಡಿ ತಂಡದೊಂದಿಗೆ ಚಿನ್ನದ ಪದಕ ಜಯಿಸಿದರು. 15 ಆಟಗಾರರನ್ನು ಒಳಗೊಂಡಿದ್ದ ಭಾರತೀಯ ತಂಡವು ಪ್ರತಿಸ್ಪರ್ಧಿಗಳನ್ನು ಮಣಿಸಿ ಏಷ್ಯಾದ ಚಾಂಪಿಯನ್ ಆಗಿ ಹೊರಹೊಮ್ಮಿತು.



ಇದೇ ವೇಳೆ ಜೂನ್ 4ರಿಂದ 6ರವರೆಗೆ ನಡೆದ ಪ್ರಥಮ ಜೂನಿಯರ್ (ಅಂಡರ್-19) ಏಷ್ಯನ್ ಆಟ್ಯಾಪಟ್ಯಾ ಚಾಂಪಿಯನ್‌ಶಿಪ್ನಲ್ಲಿ ದೇವಿಹಾಳ ತಾಂಡಾದ ಯುವ ಕ್ರೀಡಾಪಟು ಉಳವೇಶ ಶಿವಾಜಿ ಲಮಾಣಿ ಅವರು ಭಾರತೀಯ ತಂಡದ ನಾಯಕನಾಗಿ ತಂಡವನ್ನು ಮುನ್ನಡೆಸಿದರು. ಅವರ ನಾಯಕತ್ವದಲ್ಲಿ 15 ಸದಸ್ಯರ ಭಾರತೀಯ ತಂಡ ಪ್ರಥಮ ಸ್ಥಾನ ಪಡೆದು ಚಿನ್ನದ ಪದಕ ತನ್ನದಾಗಿಸಿಕೊಂಡಿತು.

> "ಗ್ರಾಮೀಣ ಭಾಗದ ಯುವಕರು ಅಂತರರಾಷ್ಟ್ರೀಯ ಮಟ್ಟದಲ್ಲಿ ಚಿನ್ನದ ಸಾಧನೆ ಮಾಡಿರುವುದು ಗದಗ ಜಿಲ್ಲೆಯ ಹೆಮ್ಮೆ. ಇವರ ಸಾಧನೆ ಇತರ ಯುವಕರಿಗೆ ಪ್ರೇರಣೆಯಾಗಬೇಕು."
> –ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ

ಗ್ರಾಮೀಣ ಹಿನ್ನೆಲೆಯಿಂದ ಬಂದಿರುವ ಈ ಇಬ್ಬರು ಕ್ರೀಡಾಪಟುಗಳು ಅಂತರರಾಷ್ಟ್ರೀಯ ಮಟ್ಟದಲ್ಲಿ ಭಾರತದ ಧ್ವಜ ಹಾರಿಸಿ ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸಿರುವುದು ಕ್ರೀಡಾ ವಲಯದಲ್ಲಿ ಮೆಚ್ಚುಗೆಗೆ ಪಾತ್ರವಾಗಿದೆ. ಸೀಮಿತ ಸೌಲಭ್ಯಗಳ ನಡುವೆಯೂ ಸಾಧನೆ ಮಾಡುವ ಮೂಲಕ ಅವರು ಯುವ ಸಮುದಾಯಕ್ಕೆ ಮಾದರಿಯಾಗಿದ್ದಾರೆ.

ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಗ್ರಾಮೀಣ ಭಾಗದ ಪ್ರತಿಭೆಗಳು ಜಾಗತಿ-ಕ ಮಟ್ಟದಲ್ಲಿ ಸಾಧನೆ ಮಾಡುತ್ತಿರುವುದು ಹೆಮ್ಮೆಯ ಸಂಗತಿ. ಪರಿಶ್ರಮ, ಶಿಸ್ತು ಮತ್ತು ಆತ್ಮವಿಶ್ವಾಸ ಇದ್ದರೆ ಯಾವುದೇ ಗುರಿ ಅಸಾಧ್ಯವಲ್ಲ ಎಂಬುದನ್ನು ಈ ಕ್ರೀಡಾಪಟುಗಳು ಸಾಬೀತುಪಡಿಸಿದ್ದಾರೆ ಎಂದು ಶ್ಲಾಘಿಸಿದರು.

ಈ ಸಂದರ್ಭದಲ್ಲಿ ಮಾಜಿ ಸಚಿವ ಎಚ್.ಕೆ. ಪಾಟೀಲ ಹಾಗೂ ಶಾಸಕ ಜಿ.ಎಸ್. ಪಾಟೀಲ ಅವರು ದೂರವಾಣಿ ಮೂಲಕ ಕ್ರೀಡಾಪಟುಗಳೊಂದಿಗೆ ಮಾತನಾಡಿ ಅಭಿನಂದನೆ ಸಲ್ಲಿಸಿದರು. ಅಂತರರಾಷ್ಟ್ರೀಯ ಮಟ್ಟದಲ್ಲಿ ಚಿನ್ನದ ಪದಕ ಗೆದ್ದು ಜಿಲ್ಲೆ, ರಾಜ್ಯ ಹಾಗೂ ದೇಶದ ಕೀರ್ತಿಯನ್ನು ಹೆಚ್ಚಿಸಿರುವುದು ಶ್ಲಾಘನೀಯ ಸಾಧನೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಒಂದೇ ಜಿಲ್ಲೆಯ ಇಬ್ಬರು ಯುವಕರು ಸೀನಿಯರ್ ಹಾಗೂ ಜೂನಿಯರ್ ವಿಭಾಗಗಳಲ್ಲಿ ಭಾರತಕ್ಕೆ ಚಿನ್ನದ ಪದಕ ತಂದುಕೊಟ್ಟಿರುವುದು ಗದಗ ಜಿಲ್ಲೆಯ ಕ್ರೀಡಾ ಇತಿಹಾಸದಲ್ಲೇ ಅಪರೂಪದ ಸಾಧನೆಯಾಗಿದೆ. ಈ ಸಾಧನೆಯಿಂದ ಜಿಲ್ಲೆಯ ಕ್ರೀಡಾಪಟುಗಳಲ್ಲಿ ಹೊಸ ಆತ್ಮವಿಶ್ವಾಸ ಮೂಡಿದ್ದು, ಆಟ್ಯಾಪಟ್ಯಾ ಕ್ರೀಡೆಗೆ ಮತ್ತಷ್ಟು ಉತ್ತೇಜನ ದೊರೆತಿದೆ.

ಕಾರ್ಯಕ್ರಮದಲ್ಲಿ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ, ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಡಾ. ಬಸವರಾಜ ಬಳ್ಳಾರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕ ವಸಂತ ಮಡ್ಲೂರ, ಮನೋಜ್ ರಾಠೋಡ, ಕ್ರೀಡಾಪಟುಗಳ ಪಾಲಕರು, ತರಬೇತುದಾರರು ಹಾಗೂ ಸ್ನೇಹಿತರು ಉಪಸ್ಥಿತರಿದ್ದರು.


ಶಿರಹಟ್ಟಿಯಲ್ಲಿ ಬಿತ್ತನೆ ಕಾರ್ಯ ಭರಾಟೆ; ಉತ್ತಮ ಮಳೆಯಿಂದ ರೈತರಲ್ಲಿ ಉತ್ಸಾಹ

# ಧಾರಾಕಾರ ಮಳೆಗೆ ಚಿಗುರೊಡೆದ ಕೃಷಿ ಕನಸು

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಮುಂಗಾರು ಆರಂಭದಲ್ಲೇ ಉತ್ತಮ ಮಳೆಯಾಗಿರುವುದು ಶಿರಹಟ್ಟಿ ತಾಲೂಕಿನ ರೈತರಲ್ಲಿ ಹೊಸ ಆಶಾಭಾವನೆ ಮೂಡಿಸಿದ್ದು, ತಾಲೂಕಿನಾದ್ಯಂತ ಬಿತ್ತನೆ ಕಾರ್ಯ ಜೋರಾಗಿ ಸಾಗುತ್ತಿದೆ. ವಾಡಿಕೆಗಿಂತ ಶೇ.35ರಷ್ಟು ಅಧಿಕ ಮಳೆಯಾಗಿರುವ ಹಿನ್ನೆಲೆಯಲ್ಲಿ ಹೊಲಗಳು ಹದಗೊಂಡಿದ್ದು, ರೈತರು ಬೀಜ ಮತ್ತು ಗೊಬ್ಬರಗಳೊಂದಿಗೆ ಕೃಷಿ ಚಟುವಟಿಕೆಗಳಲ್ಲಿ ತೊಡಗಿದ್ದಾರೆ.

ತಾಲೂಕಿನಲ್ಲಿ ಜನವರಿ 1ರಿಂದ ಜೂನ್ 4ರವರೆಗೆ 130.9 ಮಿ.ಮೀ. ವಾಡಿಕೆ ಮಳೆಯಾಗಬೇಕಾಗಿತ್ತು. ಆದರೆ ಇದೇ ಅವಧಿಯಲ್ಲಿ 176.9 ಮಿ.ಮೀ. ಮಳೆಯಾಗಿದ್ದು, ಶೇ.35ರಷ್ಟು ಹೆಚ್ಚುವರಿ ಮಳೆ ದಾಖಲಾಗಿದೆ. ಮುಂಗಾರು ಪೂರ್ವದಲ್ಲಿಯೇ ಆಗಿಂದಾಗ್ಗೆ ಸುರಿದ ಮಳೆಯಿಂದ ರೈತರು ತಮ್ಮ ಜಮೀನುಗಳನ್ನು ಬಿತ್ತನೆಗೆ ಸಿದ್ಧಪಡಿಸಿಕೊಂಡಿದ್ದರು. ಇದೀಗ ಜಮೀನುಗಳು ಬಿತ್ತನೆಗೆ ಯೋಗ್ಯವಾಗಿರುವುದರಿಂದ ರೈತರು ಬೀಜ-ಗೊಬ್ಬರ ಖರೀದಿಸಿ



ಹೊಲಗಳತ್ತ ಮುಖ ಮಾಡಿದ್ದಾರೆ.

ಶಿರಹಟ್ಟಿ ತಾಲೂಕಿನಲ್ಲಿ ಒಟ್ಟು 51,698 ಹೆಕ್ಟೇರ್ ಭೌಗೋಳಿಕ ವಿಸ್ತೀರ್ಣವಿದ್ದು, ಅದರಲ್ಲಿ 46,735 ಹೆಕ್ಟೇರ್ ಪ್ರದೇಶ ಕೃಷಿಗೆ ಯೋಗ್ಯವಾಗಿದೆ. ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ 36,430 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಮಾಡುವ ಗುರಿ ಹೊಂದಲಾಗಿದೆ.

ಈಗಾಗಲೇ 10,355 ಹೆಕ್ಟೇರ್ ಪ್ರದೇಶದಲ್ಲಿ ವಿವಿಧ ಬೆಳೆಗಳ ಬಿತ್ತನೆ ಪೂರ್ಣಗೊಂಡಿದೆ. ಮೆಕ್ಕೆಜೋಳ 8,500 ಹೆಕ್ಟೇರ್, ಹೆಸರು 1,220 ಹೆಕ್ಟೇರ್, ತೆ-ೂಗರಿ 550 ಹೆಕ್ಟೇರ್, ಶೇಂಗಾ 25 ಹೆಕ್ಟೇರ್, ಸೋಯಾಬಿನ್ 15 ಹೆಕ್ಟೇರ್ ಹಾಗೂ ಹತ್ತಿ 45 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಮಾಡಲಾಗಿದೆ. ಮುಂದಿನ ಕೆಲ ದಿನಗಳಲ್ಲಿ ಮಳೆ ಮುಂದುವರಿದರೆ ಬಿತ್ತನೆ ಕಾರ್ಯ ಮತ್ತಷ್ಟು ವೇಗ ಪಡೆಯುವ ನಿರೀಕ್ಷೆಯಿದೆ.

ಕೃಷಿ ಇಲಾಖೆಯ ಅಂಕಿ-ಅಂಶಗಳ ಪ್ರಕಾರ ತಾಲೂಕಿನಲ್ಲಿ ಯೂರಿಯಾ 783.5 ಮೆಟ್ರಿಕ್ ಟನ್, ಡಿಎಪಿ 126.5 ಮೆಟ್ರಿಕ್ ಟನ್ ಹಾಗೂ ಕಾಂಪ್ಲೆಕ್ಸ್ ಗೊಬ್ಬರ 617 ಮೆಟ್ರಿಕ್ ಟನ್ ದಾಸ್ತಾನು ಲಭ್ಯವಿದೆ.

ಹೆಸರು ಬೀಜ 67.20 ಕ್ವಿಂಟಲ್ ದಾಸ್ತಾನು ಇದ್ದು, ಅದರಲ್ಲಿ 66.20 ಕ್ವಿಂಟಲ್ ವಿತರಿಸಲಾಗಿದೆ. ತೊಗರಿ ಬೀಜ 187.20 ಕ್ವಿಂಟಲ್ ವಿತರಿಸಲಾಗಿದೆ. ಮೆಕ್ಕೆಜೋಳ ಬೀಜ 476.24 ಕ್ವಿಂಟಲ್ ಲಭ್ಯವಿದ್ದು, 208.86 ಕ್ವಿಂಟಲ್ ವಿತರಿಸಲಾಗಿದ್ದು, 267.86 ಕ್ವಿಂಟಲ್ ದಾಸ್ತಾನು ಉಳಿದಿದೆ.

ಕೃಷಿ ಇಲಾಖೆಯಿಂದ ಹೆಚ್ಚಿನ ಮಾರ್ಗದರ್ಶನಕ್ಕೆ ಒತ್ತಾಯ

ಪ್ರಸ್ತುತ ಮಾರುಕಟ್ಟೆಯಲ್ಲಿ ವಿವಿಧ ಕಂಪನಿಗಳ ಹಾಗೂ ತಳಿಗಳ ಬೀಜಗಳು ಮಾರಾಟವಾಗುತ್ತಿದ್ದು, ಅವುಗಳ ಗುಣಮಟ್ಟದ ಬಗ್ಗೆ ರೈತರಿಗೆ ಸಮರ್ಪಕ ಮಾಹಿತಿ ನೀಡಬೇಕಾಗಿದೆ. ಕೃಷಿ ಅಧಿಕಾರಿಗಳು ಗ್ರಾಮ ಮಟ್ಟದಲ್ಲಿ ರೈತರ ಜಮೀನುಗಳಿಗೆ ಭೇಟಿ ನೀಡಿ ಬೆಳೆಗಳ ಸ್ಥಿತಿಗತಿ ಪರಿಶೀಲಿಸಬೇಕು ಹಾಗೂ ರೋಗ-ಕೀಟಗಳ ಹತೋಟಿ ಕುರಿತು ಸಲಹೆ ನೀಡಬೇಕು ಎಂಬ ಒತ್ತಾಯ ರೈತರಿಂದ ಕೇಳಿಬಂದಿದೆ.

ಜೊತೆಗೆ ಬೀಜ ಮತ್ತು ಗೊಬ್ಬರಗಳ ಕೃತಕ ಅಭಾವ ಉಂಟಾಗದಂತೆ ನಿಗಾ ವಹಿಸುವುದು, ಬೆಳೆಗಳಲ್ಲಿ ರೋಗ ಹರಡದಂತೆ ಮುನ್ನೆಚ್ಚರಿಕಾ ಕ್ರಮಗಳ ಕುರಿತು ಜಾಗೃತಿ ಮೂಡಿಸುವುದು ಹಾಗೂ ಹೆಚ್ಚಿನ ಇಳುವರಿ ಪಡೆಯಲು ವೈಜ್ಞಾನಿಕ ಕೃಷಿ ಪದ್ಧತಿಗಳ ಕುರಿತು ತರಬೇತಿ ನೀಡುವುದು ಅಗತ್ಯವಾಗಿದೆ ಎಂದು ರೈತರು ಅಭಿಪ್ರಾಯಪಟ್ಟಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿದ ಸಹಾಯಕ ಕೃಷಿ ನಿರ್ದೇಶಕ ಶಿವಕುಮಾರ ಕಾಶಪ್ಪನವರ, ರೈತರು ಯೂರಿಯಾ ಗೊಬ್ಬರವನ್ನು ಮಿತವಾಗಿ ಬಳಸಬೇಕು. ಬೀಜ ಮತ್ತು ಗೊಬ್ಬರ ಖರೀದಿಸುವಾಗ ಕಡ್ಡಾಯವಾಗಿ ಎಂಆರ್‌ಪಿ ಬಿಲ್ ಪಡೆಯಬೇಕು. ಮಾರಾಟಗಾರರು ಸಹ ರೈತರಿಗೆ ಬಿಲ್ ನೀಡುವುದನ್ನು ಕಡ್ಡಾಯವಾಗಿ ಪಾಲಿಸಬೇಕು. ದಾಸ್ತಾನು ಪ್ರಮಾಣವನ್ನು ಅಂಗಡಿಗಳಲ್ಲಿ ಪ್ರದರ್ಶಿಸುವಂತೆ ಸೂಚಿಸಲಾಗಿದೆ. ನ್ಯಾನೋ ಯೂರಿಯಾ ಹಾಗೂ ನ್ಯಾನೋ ಡಿಎಪಿ ಬಳಕೆ ಮಾಡುವುದರಿಂದ ಗೊಬ್ಬರ ಬಳಕೆ ಕಡಿಮೆಯಾಗಿ ಉತ್ತಮ ಫಲಿತಾಂಶ ಪಡೆಯಬಹುದು ಎಂದು ಸಲಹೆ ನೀಡಿದರು.

'ಈ ತಿಂಗ್ಳು' ಸುನಾದ ಕಾರ್ಯಕ್ರಮದಲ್ಲಿ ಸಂತ ಶಿಶುನಾಳ ಶರೀಫರ ಸಾಹಿತ್ಯ ವೈಭವ ಅನಾವರಣ

# ಶರೀಫರ ತತ್ವಪದಗಳಲ್ಲಿ ಜೀವನದ ಮೌಲ್ಯ ಅಡಗಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡ ಸಾಹಿತ್ಯದಲ್ಲಿ ಶರಣ ಸಾಹಿತ್ಯ, ವಚನ ಸಾಹಿತ್ಯ, ಚುಟುಕು ಸಾಹಿತ್ಯ, ಬಂಡಾಯ ಸಾಹಿತ್ಯ ಹಾಗೂ ಜನಪದ ಸಾಹಿತ್ಯ ಸೇರಿದಂತೆ ಹಲವಾರು ಸಾಹಿತ್ಯ ಪ್ರಕಾರಗಳಿವೆ. ಜನಪದ ಸಾಹಿತ್ಯದ ಮೂಲಕ ಸಮಾಜಕ್ಕೆ ಮೌಲ್ಯಯುತ ಸಂದೇಶಗಳನ್ನು ನೀಡಿದ ಮಹಾನ್ ದಾರ್ಶನಿಕರಲ್ಲಿ ಸಂತ ಶಿಶುನಾಳ ಶರೀಫರು ಪ್ರಮುಖರು ಎಂದು ಗದಗ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಮಹಾವಿದ್ಯಾಲಯದ ಕನ್ನಡ ಉಪನ್ಯಾಸಕ ಸಿದ್ದಲಿಂಗೇಶ್ ಸಜ್ಜನ ಶೆಟ್ಟರ್ ಹೇಳಿದರು.

ನಗರದ ಬಣ್ಣದ ಮನೆ ಸಾಂಸ್ಕೃತಿಕ ವೇದಿಕೆ ಹಾಗೂ ಜೇನುಗೂಡು ಜಾನಪದ ಕಲಾತಂಡ, ಹುಯಿಲಗೋಳ ಇವರ ಸಂಯುಕ್ತ ಆಶ್ರಯದಲ್ಲಿ ನಡೆದ 'ಈ ತಿಂಗ್ಳು' ಸುನಾದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹಿಂದೂ-ಮುಸ್ಲಿಂ ಭಾವೈಕ್ಯತೆಯ ಹರಿಕಾರರಾಗಿದ್ದ ಸಂತ ಶಿಶುನಾಳ ಶರೀಫರು ತಮ್ಮ ತತ್ವಪದಗಳು ಮತ್ತು ಜನಪದ ಗೀತೆಗಳ ಮೂಲಕ ಸಮಾಜಕ್ಕೆ ದಾರಿದೀಪವಾಗಿದ್ದಾರೆ.



ಅವರ ಸಾಹಿತ್ಯದಲ್ಲಿ ಜೀವನದ ಮೌಲ್ಯಗಳು, ಮಾನವೀಯತೆ ಹಾಗೂ ಸಮಾನತೆಯ ಸಂದೇಶಗಳು ಅಡಕವಾಗಿವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಜನಪದ ಕಲಾವಿದ ಹಾಗೂ ಸಾಮಾಜಿಕ ಚಿಂತಕ ಬಸವರಾಜ ಈರಣ್ಣವರ ಅವರು ಸಂತ ಶಿಶುನಾಳ ಶರೀಫರ ತತ್ವಪದಗಳನ್ನು ಸುಶ್ರಾವ್ಯವಾಗಿ ಹಾಡಿ, ಅವುಗಳ ಒಳಾರ್ಥ ಹಾಗೂ ದ್ವಂದ್ವ ಅರ್ಥಗಳನ್ನು ವಿವರಿಸಿದರು. ಅವರ ಗಾಯನ ಸಭಿಕರ ಮೆಚ್ಚುಗೆಗೆ ಪಾತ್ರವಾಯಿತು.


ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿದ ವೆಲ್‌ಫೇರ್ ಟೌನ್‌ಶಿಪ್ ಸಂಘದ ಅಧ್ಯಕ್ಷ ಜನಾಬ್ ಆರ್.ವೈ. ನದಾಫ್ ಮಾತನಾಡಿ, ಶಿಶುನಾಳ ಶರೀಫರು ಜಾತಿ, ಮತ, ಪಂಥಗಳ ಎಲ್ಲೆಗಳನ್ನು ಮೀರಿ ಬದುಕಿದ ಮಹಾನ್ ಸಂತರು. ಅವರ ವಿಚಾರಧಾರೆ ಮತ್ತು ಸಾಹಿತ್ಯ ಸೂರ್ಯ-ಚಂದ್ರರಿರುವವರೆಗೂ ಅಜರಾಮರವಾಗಿರಲಿದೆ ಎಂದು ಹೇಳಿದರು.

ಸಂಗೀತ ಕಾರ್ಯಕ್ರಮಕ್ಕೆ ಶರಣಪ್ಪ ತಬಲಾ ಸಾಥ್ ನೀಡಿದರು.

ಕಾರ್ಯಕ್ರಮದಲ್ಲಿ ಡಾ. ಶಾಂತಕುಮಾರ ಭಜಂತ್ರಿ, ಎಂ.ಬಿ. ಮಡಿವಾಳರ, ಎ.ಎ. ನದಾಫ್, ಅಶೋಕ ಅಗಸಿಮನಿ, ವಿ.ಎಲ್. ತಮ್ಮನಗೌಡ್ರ, ವಿಜಯ ಕಿರೇಸೂರ, ಶ್ರೀಮತಿ ಭಾರತಿ ಕಿರೇಸೂರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಮಹೇಶ ಶಟವಾಜಿ ಕಾರ್ಯಕ್ರಮ ನಿರೂಪಿಸಿ, ಟಿ.ಆರ್. ಬೇವಿನಮರದ ವಂದಿಸಿದರು.

## 'ಸೀಮೆಗಳಾಚೆ' ಪ್ರವಾಸ ಕಥನ ಲೋಕಾರ್ಪಣೆ ಇಂದು




**■ ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಗದಗ ವತಿಯಿಂದ ಲೇಖಕಿ ವೀಣಾ ತಿರ್ಲಾಪೂರ ಅವರ 'ಸೀಮೆಗಳಾಚೆ – ಒಂದು ಅಮೆರಿಕಾ ಪಯಣ' ಪ್ರವಾಸ ಕಥನ ಕೃತಿ ಲೋಕಾರ್ಪಣೆ ಸಮಾರಂಭವನ್ನು ಜೂನ್ 13ರಂದು ಸಂಜೆ 6.30ಕ್ಕೆ ನಗರದ ಶ್ರೀ ತೋಂಟ–ದ ಸಿದ್ಧಲಿಂಗಶ್ರೀ ಕನ್ನಡ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ಹಾಗೂ ಮಾಜಿ ಶಾಸಕ ಡಿ.ಆರ್. ಪಾಟೀಲ ಅವರು ಕೃತಿಯನ್ನು ಲೋಕಾರ್ಪಣೆ ಮಾಡಲಿದ್ದಾರೆ.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದು, ಕೆ.ಎಲ್.ಇ. ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ. ರಾಮಚಂದ್ರ ಪಡೇಸೂರ ಅವರು ಕೃತಿ ಪರಿಚಯ ಮಾಡಿಕೊಡಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ರವಿ ಮೂಲಿಮನಿ ಭಾಗವಹಿಸಲಿದ್ದು, ಕೃತಿಯ ಲೇಖಕಿ ಹಾಗೂ ಕೆ.ಎಲ್.ಇ. ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಗೃಹವಿಜ್ಞಾನ ವಿಭಾಗದ ಮುಖ್ಯಸ್ಥೆ ವೀಣಾ ತಿರ್ಲಾಪೂರ ಉಪಸ್ಥಿತರಿರುವರು.

ಅಮೆರಿಕ ಪ್ರವಾಸದ ವೇಳೆ ಕಂಡು–ಕೇಳಿದ ಅನುಭವಗಳು, ಅಲ್ಲಿನ ಜೀವನಶೈಲಿ, ಸಂಸ್ಕೃತಿ, ಸಾಮಾಜಿಕ ವ್ಯವಸ್ಥೆ ಹಾಗೂ ಪ್ರವಾಸದ ವಿಶೇಷ ಕ್ಷಣಗಳನ್ನು ಒಳಗೊಂಡಿರುವ ಈ ಕೃತಿ ಓದುಗರಿಗೆ ಹೊಸ ಅನುಭವ ನೀಡಲಿದೆ ಎಂಬ ನಿರೀಕ್ಷೆ ವ್ಯಕ್ತವಾಗಿದೆ.

ಕಾರ್ಯಕ್ರಮದಲ್ಲಿ ಸಾಹಿತ್ಯಾಭಿಮಾನಿಗಳು, ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕೆ.ಎಂ. ಗರಗ, ದತ್ತಪ್ರಸನ್ನ ಪಾಟೀಲ ಹಾಗೂ ಡಿ.ಎಸ್. ಬಾಪೂರಿ ಪ್ರಕಟಣೆಯಲ್ಲಿ ಕೋರಿದ್ದಾರೆ.

**ವಂಚನೆಗೆ ಬಲಿಯಾದವರ ಹಣ ಮರಳಿ ಪಡೆಯಲು ಹೊಸ ವ್ಯವಸ್ಥೆ; 1930ಕ್ಕೆ ಒಂದು ಕರೆ ಮಾಡಿದರೆ ಲಕ್ಷಾಂತರ ರೂ. ಉಳಿಯುವ ಸಾಧ್ಯತೆ**

# ಸೈಬರ್ ಖದೀಮರ ಆಟಕ್ಕೆ ಪೊಲೀಸರ ಚೆಕ್‌ಮೇಟ್..!

**■ ವಿಜಯಸಾಕ್ಷಿ ಸುದ್ದಿ, ಗದಗ**

ಒಂದು ಮೊಬೈಲ್ ಕರೆ... ಒಂದು ನಕಲಿ ಲಿಂಕ್... ಒಂದು ಒಟಿಪಿ...! ಸಾಕು, ಜೀವನಪೂರ್ತಿ ಕೂಡಿಟ್ಟ ಹಣ ಕ್ಷಣಾರ್ಧದಲ್ಲಿ ಖದೀಮರ ಖಾತೆಗೆ ಜಮೆಯಾಗುತ್ತದೆ. ಸೈಬರ್ ವಂಚಕರ ಕುತಂತ್ರಕ್ಕೆ ಬಲಿಯಾಗಿ ಸಾವಿರಾರು, ಲಕ್ಷಾಂತರ ರೂಪಾಯಿ ಕಳೆದುಕೊಂಡು ಕಣ್ಣೀರಿಡುವವರ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಲೇ ಇದೆ. ಆದರೆ ಇಂತಹ ಸಂತ್ರಸ್ತರಿಗೆ ಇದೀಗ ದೊಡ್ಡ ನೆಮ್ಮದಿಯ ಸುದ್ದಿ ಸಿಕ್ಕಿದ್ದು, ಕಳೆದುಕೊಂಡ ಹಣವನ್ನು ಮರಳಿ ಪಡೆಯಲು ಕೇಂದ್ರ ಸರ್ಕಾರ ಹೊಸ ವ್ಯವಸ್ಥೆ ಜಾರಿಗೊಳಿಸಿದೆ.

ಸೈಬರ್ ವಂಚನೆಗೆ ಒಳಗಾದವರು ಪೊಲೀಸ್ ಠಾಣೆ, ಬ್ಯಾಂಕ್ ಹಾಗೂ ವಿವಿಧ ಕಚೇರಿಗಳ ಸುತ್ತ ಅಲೆದಾಡುವ ದಿನಗಳಿಗೆ ತೆರೆ ಬಿದ್ದಿದೆ. ರಾಷ್ಟ್ರೀಯ ಸೈಬರ್ ಅಪರಾಧ ವರದಿ ಪೋರ್ಟಲ್ (ಒಅಖಕ) ಅಡಿಯಲ್ಲಿ ಜಾರಿಗೊಂಡಿರುವ 'ಮನಿ ರಿಸ್ಟೋರೇಶನ್ ಮಾಡ್ಯೂಲ್' ಮೂಲಕ ಸಂತ್ರಸ್ತರು ತಮ್ಮ ಫ್ರೀಜ್ ಆಗಿರುವ ಹಣವನ್ನು ಆನ್‌ಲೈನ್ ಮೂಲಕವೇ ಮರಳಿ ಪಡೆಯಬಹುದಾಗಿದೆ.

ಈ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಗದಗ ಜಿಲ್ಲಾ ಪೊಲೀಸರು ವ್ಯಾಪಕ ಅರಿವು ಕಾರ್ಯಕ್ರಮಗಳನ್ನು ನಡೆಸುತ್ತಿದ್ದು, ಸೈಬರ್ ವಂಚನೆಗೆ ಒಳಗಾದವರು ಅನುಸರಿಸಬೇಕಾದ ಕ್ರಮಗಳ ಕುರಿತು ಮಾಹಿತಿ ನೀಡುತ್ತಿದ್ದಾರೆ.

**'ಗೋಲ್ಡನ್ ಅವರ್'ನಲ್ಲಿ ದೂರು ಕೊಟ್ಟರೆ ಹಣ ಉಳಿಯುವ ಸಾಧ್ಯತೆ ಹೆಚ್ಚು**

ಸೈಬರ್ ವಂಚನೆ ಪ್ರಕರಣಗಳಲ್ಲಿ ಮೊದಲ ಕೆಲವು ಗಂಟೆಗಳು ಅತ್ಯಂತ ಮಹತ್ವದ್ದಾಗಿವೆ.






ಹಣ ಖಾತೆಯಿಂದ ವರ್ಗಾವಣೆಯಾದ ತಕ್ಷಣವೇ 1930 ಸಹಾಯವಾಣಿಗೆ ಕರೆ ಮಾಡಿ ಅಥವಾ ರಾಷ್ಟ್ರೀಯ ಸೈಬರ್ ಅಪರಾಧ ವರದಿ ಪೋರ್ಟಲ್‌ನಲ್ಲಿ ದೂರು ದಾಖಲಿಸಿದರೆ, ವಂಚಕರು ಹಣವನ್ನು ಹಿಂಪಡೆಯುವ ಮುನ್ನವೇ ಅದನ್ನು ಫ್ರೀಜ್ ಮಾಡುವ ಸಾಧ್ಯತೆ ಹೆಚ್ಚಿರುತ್ತದೆ.

ತಡವಾದರೆ ಹಣ ಹಲವು ಖಾತೆಗಳಿಗೆ ವರ್ಗಾವಣೆಯಾಗುವ ಸಾಧ್ಯತೆ ಇದ್ದು, ಮರುಪಾವತಿ ಪ್ರಕ್ರಿಯೆ ಸಂಕೀರ್ಣವಾಗುತ್ತದೆ ಎಂದು ಪೊಲೀಸರು ಎಚ್ಚರಿಕೆ ನೀಡಿದ್ದಾರೆ.

ಸಂತ್ರಸ್ತರು ಎನ್‌ಸಿಆರ್‌ಪಿ ಪೋರ್ಟಲ್‌ನಲ್ಲಿ ದಾಖಲಾಗಿರುವ ತಮ್ಮ ದೂರಿನೊಂದಿಗೆ ಲಿಂಕ್ ಆಗಿರುವ ಮೊಬೈಲ್ ಸಂಖ್ಯೆಯ ಮೂಲಕ ಲಾಗಿನ್ ಆಗಬೇಕು. ನಂತರ 14 ಅಂಕಿಯ ದೂರು ಸಂಖ್ಯೆಯನ್ನು ನಮೂದಿಸಿ ಅಗತ್ಯ ದಾಖಲೆಗಳು ಹಾಗೂ ಬ್ಯಾಂಕ್ ಖಾತೆ ವಿವರಗಳನ್ನು ಸಲ್ಲಿಸಬೇಕು.

> "ಸೈಬರ್ ವಂಚನೆಗೆ ಒಳಗಾದ ಕ್ಷಣವೇ 1930ಕ್ಕೆ ಕರೆ ಮಾಡಿ. ಸಮಯಕ್ಕೆ ದೂರು ನೀಡಿದರೆ ಕಳೆದುಕೊಂಡ ಹಣವನ್ನು ಫ್ರೀಜ್ ಮಾಡಿ ಮರಳಿ ಪಡೆಯುವ ಅವಕಾಶ ಹೆಚ್ಚಿರುತ್ತದೆ."
> **– ರೋಹನ್ ಜಗದೀಶ್,**
> ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಹಿ

ಪೊಲೀಸ್ ಇಲಾಖೆ ಹಾಗೂ ಬ್ಯಾಂಕ್ ಅಧಿಕಾರಿಗಳು ಪರಿಶೀಲನೆ ನಡೆಸಿದ ಬಳಿಕ ಫ್ರೀಜ್ ಆಗಿರುವ ಹಣವನ್ನು ನೇರವಾಗಿ ಸಂತ್ರಸ್ತರ ಖಾತೆಗೆ ವರ್ಗಾಯಿಸಲಾಗುತ್ತದೆ.

**₹50 ಸಾವಿರದವರೆಗೆ ಎಫ್‌ಐಆರ್ ಅಗತ್ಯವಿಲ್ಲ**

ಒಂದು ಖಾತೆಯಲ್ಲಿ ₹50 ಸಾವಿರದವರೆಗೆ ಹಣ ಫ್ರೀಜ್ ಆಗಿದ್ದರೆ ಪೊಲೀಸ್ ವರದಿ ಆಧಾರದ ಮೇಲೆ ಮರುಪಾವತಿ ಸಾಧ್ಯವಾಗುತ್ತದೆ. ಆದರೆ ₹50 ಸಾವಿರಕ್ಕಿಂತ ಹೆಚ್ಚಿನ ಮೊತ್ತದ ಪ್ರಕರಣಗಳಲ್ಲಿ ಎಫ್‌ಐಆರ್ ಹಾಗೂ ಹೆಚ್ಚುವರಿ ಪರಿಶೀಲನೆ ಕಡ್ಡಾಯವಾಗಿರುತ್ತದೆ.

'ನಿಮ್ಮ ಹಣ ಮರಳಿ ಕೊಡಿಸುತ್ತೇವೆ' ಎಂದು ಕರೆ ಮಾಡುವ ಮಧ್ಯವರ್ತಿಗಳು ಹಾಗೂ ಖಾಸಗಿ ಏಜೆಂಟರ ಬಗ್ಗೆ ಎಚ್ಚರಿಕೆಯಿಂದಿರಬೇಕು. ಹಣ ಮರುಪಾವತಿ ಪ್ರಕ್ರಿಯೆ ಸಂಪೂರ್ಣ ಉಚಿತವಾಗಿದ್ದು, ಯಾರಿಗೂ ಹಣ ನೀಡುವ ಅಗತ್ಯವಿಲ್ಲ ಎಂದು ಪೊಲೀಸರು ಸ್ಪಷ್ಟಪಡಿಸಿದ್ದಾರೆ.

**ಜಿಲ್ಲಾದ್ಯಂತ ಜಾಗೃತಿ ಅಭಿಯಾನ**

ಸೈಬರ್ ವಂಚನೆ ಪ್ರಕರಣಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಗದಗ ಜಿಲ್ಲಾ ಪೊಲೀಸರು ಶಾಲೆ, ಕಾಲೇಜು, ಬ್ಯಾಂಕ್, ಸಾರ್ವಜನಿಕ ಸಭೆ ಹಾಗೂ ಗ್ರಾಮ ಮಟ್ಟದಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದಾರೆ. ಬ್ಯಾಂಕ್ ಖಾತೆ ಸಂಖ್ಯೆ, ಒಟಿಪಿ, ಯುಪಿಐ ಪಿನ್, ಎಟಿಎಂ ಪಿನ್ ಮತ್ತು ಪಾಸ್‌ವರ್ಡ್ ಮಾಹಿತಿಯನ್ನು ಯಾರೊಂದಿಗೂ ಹಂಚಿಕೊಳ್ಳಬಾರದು ಎಂದು ಸಾರ್ವಜನಿಕರಿಗೆ ಎಚ್ಚರಿಕೆ ನೀಡಲಾಗುತ್ತಿದೆ.

**ಒಂದು ಕ್ಷಣದ ನಿರ್ಲಕ್ಷ್ಯ... ಲಕ್ಷಾಂತರ ರೂ. ನಷ್ಟ!**

ಸೈಬರ್ ವಂಚಕರು ಹೊಸ ಹೊಸ ತಂತ್ರಗಳ ಮೂಲಕ ಜನರನ್ನು ಗುರಿಯಾಗಿಸುತ್ತಿದ್ದಾರೆ. ಆದರೆ ಒಂದು ತ್ವರಿತ ದೂರು, ಒಂದು ಕರೆ ಮತ್ತು ಸ್ವಲ್ಪ ಜಾಗೃತಿ ನಿಮ್ಮ ಕಷ್ಟಪಟ್ಟು ಸಂಪಾದಿಸಿದ ಹಣವನ್ನು ಉಳಿಸಬಹುದು. ಆದ್ದರಿಂದ "ವಂಚನೆ ಗೊತ್ತಾದ ಕ್ಷಣವೇ 1930" ಎಂಬುದನ್ನು ಮರೆಯಬೇಡಿ.

**ಬಾಲ ವಿನಾಯಕ ವಿದ್ಯಾನಿಕೇತನದಲ್ಲಿ ಸಂಸತ್ ಚುನಾವಣೆ ಸಂಭ್ರಮ; 95.36% ಮತದಾನ ದಾಖಲೆ**

## ಶಾಲೆಯಲ್ಲೇ ಪ್ರಜಾಪ್ರಭುತ್ವದ ಪಾಠ




**ಪ್ರಜಾಪ್ರಭುತ್ವದ ಪ್ರಾಯೋಗಿಕ ಪಾಠ**

ಮತದಾನ, ನಾಯಕತ್ವ ಹಾಗೂ ಜನಪ್ರತಿನಿಧಿಗಳ ಆಯ್ಕೆಯ ಮಹತ್ವವನ್ನು ವಿದ್ಯಾರ್ಥಿಗಳಿಗೆ ಅನುಭವಾತ್ಮಕವಾಗಿ ತಿಳಿಸಿಕೊಟ್ಟ ಈ ಶಾಲಾ ಚುನಾವಣೆ, ಭವಿಷ್ಯದ ಜಾಗೃತ ಮತದಾರರನ್ನು ರೂಪಿಸುವಲ್ಲಿ ಮಹತ್ವದ ಹೆಜ್ಜೆಯಾಗಿ ಗಮನ ಸೆಳೆಯಿತು.

**■ ವಿಜಯಸಾಕ್ಷಿ ಸುದ್ದಿ, ಗದಗ**

ಪ್ರಜಾಪ್ರಭುತ್ವದ ಮೌಲ್ಯಗಳನ್ನು ಬಾಲ್ಯದಲ್ಲಿಯೇ ವಿದ್ಯಾರ್ಥಿಗಳ ಮನಸ್ಸಿನಲ್ಲಿ ಬಿತ್ತುವ ವಿಶಿಷ್ಟ ಪ್ರಯತ್ನವಾಗಿ ನಗರದ ಬಾಲ ವಿನಾಯಕ ವಿದ್ಯಾನಿಕೇತನ ಶಾಲೆಯಲ್ಲಿ ಶಾಲಾ ಸಂಸತ್ ಚುನಾವಣೆ ಯಶಸ್ವಿಯಾಗಿ ನಡೆಯಿತು. ಸಾರ್ವತ್ರಿಕ ಚುನಾವಣೆಯ ಮಾದರಿಯಲ್ಲಿಯೇ ನಡೆದ ಈ ಚುನಾವಣೆಯಲ್ಲಿ ವಿದ್ಯಾರ್ಥಿಗಳು ಉತ್ಸಾಹದಿಂದ ಮತದಾನ ಮಾಡಿ ತಮ್ಮ ನಾಯಕ–ನಾಯಕಿಯರನ್ನು ಆಯ್ಕೆ ಮಾಡಿದರು.

ಶಾಲಾ ನಾಯಕ–ನಾಯಕಿ ಹಾಗೂ ಉಪನಾಯಕ–ಉಪನಾಯಕಿಯರ ಆಯ್ಕೆಗಾಗಿ ಆಯೋಜಿಸಿದ್ದ ಚುನಾವಣೆಯಲ್ಲಿ ಅಭ್ಯರ್ಥಿಗಳ ಘೋಷಣೆ, ನಾಮಪತ್ರ ಸಲ್ಲಿಕೆ, ಪ್ರಚಾರ ಭಾಷಣ, ಪೋಸ್ಟರ್ ಮೇಕಿಂಗ್ ಸ್ಪರ್ಧೆ, ಚುನಾವಣಾ ಜಾಗೃತಿ ನಾಟಕ ಸೇರಿದಂತೆ ಚುನಾವಣೆಯ ಎಲ್ಲ ಹಂತಗಳನ್ನು ವ್ಯವಸ್ಥಿತವಾಗಿ ಅನುಷ್ಠಾನಗೊಳಿಸಲಾಯಿತು. ಇದರಿಂದ ವಿದ್ಯಾರ್ಥಿಗಳಿಗೆ ಚುನಾವಣಾ ಪ್ರಕ್ರಿಯೆಯ ನೈಜ ಅನುಭವ ದೊರೆಯುವಂತಾಯಿತು.

ಚುನಾವಣೆಯ ವಿಶೇಷ ಆಕರ್ಷಣೆಯಾಗಿ ಎಲೆಕ್ಟ್ರಾನಿಕ್ ವೋಟಿಂಗ್ ಮಷಿನ್ (ಇವಿಎಂ) ಮಾದರಿಯ ಸಾಫ್ಟ್‌ವೇರ್‌ನ್ನು ಸಿದ್ಧಪಡಿಸಲಾಗಿತ್ತು. ವಿದ್ಯಾರ್ಥಿಗಳು ಇದೇ ವ್ಯವಸ್ಥೆಯ ಮೂಲಕ ಮತ ಚಲಾಯಿಸಿ ತಮ್ಮ ಪ್ರತಿನಿಧಿಗಳನ್ನು ಆಯ್ಕೆ ಮಾಡಿದರು. ಯುವ ಪೀಳಿಗೆಗೆ ಮತದಾನದ ಮಹತ್ವ ಮತ್ತು ಪ್ರಜಾಪ್ರಭುತ್ವದ ಜವಾಬ್ದಾರಿಗಳ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ಈ ವಿನೂತನ ಪ್ರಯೋಗ ಕೈಗೊಳ್ಳಲಾಗಿತ್ತು.

ಚುನಾವಣೆಗೆ ಮೂರು ಮತಗಟ್ಟೆಗಳನ್ನು ಸ್ಥಾಪಿಸಲಾಗಿತ್ತು. ಒಟ್ಟು 26 ಅಭ್ಯರ್ಥಿಗಳು ಸ್ಪರ್ಧಿಸಿದ್ದರೆ, 496 ಮತದಾರರಲ್ಲಿ 473 ವಿದ್ಯಾರ್ಥಿಗಳು ಮತದಾನ ಮಾಡಿ ಶೇ.95.36ರಷ್ಟು ಮತದಾನ ದಾಖಲಿಸಿದರು. 6ನೇ ತರಗತಿಯಿಂದ 10ನೇ ತರಗತಿಯವರೆಗಿನ ವಿದ್ಯಾರ್ಥಿಗಳಿಗೆ ಮತದಾನದ ಹಕ್ಕು ನೀಡಲಾಗಿತ್ತು.

ಚುನಾವಣೆಯ ಫಲಿತಾಂಶ 'ವನ್ನು ಜೂನ್ 13ರಂದು ಪ್ರಕಟಿಸಲಾಗುವುದು ಎಂದು ಶಾಲಾ ಚುನಾವಣಾಧಿಕಾರಿ ಹಾಗೂ ಶಿಕ್ಷಕಿ ಪೂಜಾ ಎಂ. ಕಾಡಪ್ಪನವರ ತಿಳಿಸಿದ್ದಾರೆ. ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳು ಸಂಭ್ರಮ ವ್ಯಕ್ತಪಡಿಸಿದ್ದು, ಶಾಲಾ ಆವರಣವೇ ಪ್ರಜಾಪ್ರಭುತ್ವದ ಹಬ್ಬದ ವಾತಾವರಣಕ್ಕೆ ಸಾಕ್ಷಿಯಾಯಿತು.



## ಅಂತಾರಾಷ್ಟ್ರೀಯ ಯೋಗ ದಿನಾಚರಣೆಗೆ ಜಿಲ್ಲಾಮಟ್ಟದ ಸಿದ್ಧತೆ

**■ ವಿಜಯಸಾಕ್ಷಿ ಸುದ್ದಿ, ಗದಗ**

12ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಗದಗ ಜಿಲ್ಲಾ ಮಟ್ಟದಲ್ಲಿ ವಿವಿಧ ಯೋಗ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದ್ದು, ಯೋಗ ಅರಿವು–ಆಚಾರ ತರಬೇತಿ ಶಿಬಿರ, ಯೋಗ ಪ್ರಬಂಧ ಸ್ಪರ್ಧೆ ಹಾಗೂ ಯೋಗಾಸನ ಸಮೂಹ ನೃತ್ಯ ಸ್ಪರ್ಧೆಗಳು ಜರುಗಲಿವೆ.

ಎಸ್.ವೈ.ಬಿ.ಎಂ.ಎಸ್. ಯೋಗಪಾಠಶಾಲೆಯ ಬಸವ ಯೋಗ ಮಹಾವಿದ್ಯಾಲಯ, ಲಿಂಗಾಯತ ಪ್ರಗತಿಶೀಲ ಸಂಘ, ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಹಾಗೂ ಗದಗ ಜಿಲ್ಲಾ ಯೋಗ ಒಕ್ಕೂಟದ ಸಹಯೋಗದಲ್ಲಿ ಈ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಜೂನ್ 15ರಿಂದ 21ರವರೆಗೆ ಪ್ರತಿದಿನ ಬೆಳಿಗ್ಗೆ 6.30ರಿಂದ 7.30ರವರೆಗೆ ಶ್ರೀ ಜಗದ್ಗುರು ತೋಂಟ–ದಾರ್ಯ ಮಠದ ಶಿವಾನುಭವ ಮಂಟಪದಲ್ಲಿ ಯೋಗ ಅರಿವು–ಆಚಾರ ತರಬೇತಿ ಶಿಬಿರ ನಡೆಯಲಿದೆ.

"ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ" ವಿಷಯದ ಕುರಿತು ಕನ್ನಡದಲ್ಲಿ ಯೋಗ ಪ್ರಬಂಧ ಸ್ಪರ್ಧೆ ಆಯೋಜಿಸಲಾಗಿದ್ದು, ಆಸಕ್ತರು ಜೂನ್ 20ರೊಳಗೆ ತಮ್ಮ ಪ್ರಬಂಧಗಳನ್ನು ಸಲ್ಲಿಸಬಹುದಾಗಿದೆ.

ಜೂನ್ 20ರಂದು ಬಸವ ಯೋಗ ಮಂದಿರದಲ್ಲಿ ಯೋಗಾಸನ ಸಮೂಹ ನೃತ್ಯ ಸ್ಪರ್ಧೆ ನಡೆಯಲಿದ್ದು, 6ರಿಂದ 12 ಸದಸ್ಯರ ತಂಡಗಳು ಭಾಗವಹಿಸಬಹುದಾಗಿದೆ. ದೇಶಭಕ್ತಿ ಹಾಗೂ ಭಾರತೀಯ ಸಂಸ್ಕೃತಿ ಬಿಂಬಿಸುವ ಸಂಗೀತದೊಂದಿಗೆ ಯೋಗಾಸನ ಪ್ರದರ್ಶನ ನೀಡಬೇಕಾಗಿದೆ.

ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಎಲ್ಲರಿಗೂ ಪ್ರಮಾಣಪತ್ರ ಹಾಗೂ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ನಗದು ಬಹುಮಾನ, ಪ್ರಶಸ್ತಿ ಪತ್ರ ಮತ್ತು ಪದಕಗಳನ್ನು ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ 9448317188, 9448185885 ಹಾಗೂ 9449972988 ಸಂಖ್ಯೆಗಳನ್ನು ಸಂಪರ್ಕಿಸಬಹುದು ಎಂದು ಗದಗ ಜಿಲ್ಲಾ ಮಟ್ಟದ ಯೋಗ ಸಾಂಘಿಕ ಕಾರ್ಯಕ್ರಮಗಳ ಸಂಯೋಜಕ ಯೋಗಾಚಾರ್ಯ ಕೆ.ಎಸ್. ಪಲ್ಲೇದ ತಿಳಿಸಿದ್ದಾರೆ.

**20 ದಿನದ ಬೆಳೆಗೆ ಸುರುಳಿಪೂಚಿ, ಎಲೆಚುಕ್ಕಿ ಹಾಗೂ ಹಳದಿ ರೋಗ ಬಾಧೆ**

## ಹೆಸರು ಬೆಳೆಗೆ ರೋಗದ ಕಾಟ; ರೈತರಲ್ಲಿ ಆತಂಕದ ಕಾರ್ಮೋಡ

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮುಂಗಾರು ಹಂಗಾಮಿನ ಪ್ರಮುಖ ವಾಣಿಜ್ಯ ಬೆಳೆಗಳಲ್ಲೊಂದಾದ ಹೆಸರು ಬೆಳೆಗೆ ಸುರುಳಿಪೂಚಿ (ಎಲೆಮುಟಗಿ), ಎಲೆಚುಕ್ಕಿ ಹಾಗೂ ಹಳದಿ ರೋಗ ಕಾಣಿಸಿಕೊಂಡಿದ್ದು, ತಾಲೂಕಿನ ರೈತರಲ್ಲಿ ಆತಂಕ ಮನೆ ಮಾಡಿದೆ. ಬಿತ್ತನೆಯಾಗಿ ಕೇವಲ 20ರಿಂದ 25 ದಿನಗಳಾಗಿರುವ ಬೆಳೆಗೆ ರೋಗಬಾಧೆ ಕಾಣಿಸಿಕೊಂಡಿರುವುದು "ಮೊದಲ ತುತ್ತಿಗೆ ಹಳ್ಳ" ಎಂಬಂತಾಗಿದ್ದು, ರೈತರ ನಿರೀಕ್ಷೆಗಳಿಗೆ ತಣ್ಣೀರು ಎರಚಿದಂತಾಗಿದೆ.

ಎಲ್‌ನೀನೋ ಪರಿಣಾಮದಿಂದ ಈ ಬಾರಿ ಮುಂಗಾರು ಮಳೆ ಕೊರತೆಯಾಗುವ ಸಾಧ್ಯತೆ ಇದೆ ಎಂಬ ಹವಾಮಾನ ಮುನ್ಸೂಚನೆಯ ಹಿನ್ನೆಲೆಯಲ್ಲಿ ರೈತರು ಮೇ ಮೂರನೇ ಹಾಗೂ ನಾಲ್ಕನೇ ವಾರದಲ್ಲಿಯೇ ಹೆಸರು ಬಿತ್ತನೆ ಮಾಡಿದ್ದರು. ಆದರೆ ಇದೀಗ ಮಳೆಯ ಕೊರತೆಯ ಜೊತೆಗೆ ರೋಗಬಾಧೆ ಕಾಣಿಸಿಕೊಂಡಿರುವುದು ರೈತರನ್ನು ಕಂಗಾಲಾಗಿಸಿದೆ.

ಕಳೆದ ವರ್ಷವೂ ರೋಗಬಾಧೆಯಿಂದ ಹೆಸರು ಬೆಳೆ ನಷ್ಟವಾಗಿದ್ದ ಹಿನ್ನೆಲೆಯಲ್ಲಿ ರೈತರು ಈ ಬಾರಿ ಹೆಚ್ಚಿನ ಬೆಲೆ ನೀಡಿ ಅಣ್ಣಿಗೇರಿ, ನವಲಗುಂದ ಹಾಗೂ ನರಗುಂದ ಭಾಗಗಳಿಂದ ಪ್ರತಿ ಕೆ.ಜಿ.ಗೆ ಸುಮಾರು ₹160 ದರದಲ್ಲಿ ಗುಣಮಟ್ಟದ ಬೀಜ ಖರೀದಿಸಿ ಬಿತ್ತನೆ ಮಾಡಿದ್ದರು. ಕೇಂದ್ರ ಸರ್ಕಾರ ಹೆಸರು ಬೆಳೆಗೆ ಬೆಂಬಲ ಬೆಲೆ ಘೋಷಿಸಿರುವುದು ಹಾಗೂ ಕಡಿಮೆ ಮಳೆಯಲ್ಲಿಯೂ ಉತ್ತಮ ಇಳುವರಿ ನಿರೀಕ್ಷೆಯಿಂದ ಈ ಬಾರಿ ತಾಲೂಕಿನಲ್ಲಿ ಸುಮಾರು 5,100 ಹೆಕ್ಟೇರ್ ಪ್ರದೇಶದಲ್ಲಿ ಹೆಸರು ಬಿತ್ತನೆಯಾಗಿದೆ.



ಲಕ್ಷ್ಮೇಶ್ವರ, ಶಿಗ್ಗಿ, ದೊಡ್ಡೂರ, ಸೂರಣಗಿ, ಬಾಲೆಹೊಸೂರ, ಅಕ್ಕಿಗುಂದ, ಬಡ್ನಿ, ಬಟ್ಟೂರ, ಹರದಗಟ್ಟಿ, ಅಡರಕಟ್ಟಿ, ಗೊಜನೂರ, ಯಳವತ್ತಿ, ಯತ್ನಳ್ಳಿ, ಮಾಡಳ್ಳಿ, ರಾಮಗೇರಿ ಹಾಗೂ ಬಸಾಪುರ ಭಾಗಗಳ ಕಪ್ಪು ಮಣ್ಣಿನ ಜಮೀನುಗಳಲ್ಲಿ ವ್ಯಾಪಕವಾಗಿ ಹೆಸರು ಬೆಳೆದಿದ್ದು, ಇದೀಗ ರೋಗದ ಲಕ್ಷಣಗಳು ಕಾಣಿಸಿಕೊಳ್ಳುತ್ತಿರುವುದು ರೈತರಲ್ಲಿ ಮತ್ತಷ್ಟು ಆತಂಕ ಮೂಡಿಸಿದೆ.

> "ಕಳೆದ ವರ್ಷ ಮಳೆಯಿಂದ ಬೆಳೆ ಹಾನಿಯಾಗಿತ್ತು. ಈ ವರ್ಷ ಉತ್ತಮ ಇಳುವರಿ ನಿರೀಕ್ಷೆಯಲ್ಲಿ ಸಾವಿರಾರು ರೂಪಾಯಿ ಖರ್ಚು ಮಾಡಿ ಹೆಸರು ಬಿತ್ತನೆ ಮಾಡಿದ್ದೇವೆ. ಈಗ ಆರಂಭದಲ್ಲೇ ರೋಗ ಕಾಣಿಸಿಕೊಂಡಿರುವುದು ರೈತರ ಆತಂಕ ಹೆಚ್ಚಿಸಿದೆ."
> **– ಚನ್ನಪ್ಪ ಷಣ್ಮುಕಿ ಹಾಗೂ ಮಲ್ಲಪ್ಪ ಸೊರಟೂರು, ರೈತರು**

**ರೋಗಬಾಧಿತ ಕ್ಷೇತ್ರಕ್ಕೆ ಕೃಷಿ ಇಲಾಖೆ ಭೇಟಿ**

ಸೊರಟೂರು ಗ್ರಾಮದ ರೈತ ಮಹಾಂತೇಶ ಸೊರಟೂರು ಅವರ ಜಮೀನಿಗೆ ಭೇಟಿ ನೀಡಿದ ತಾಲೂಕು ಸಹಾಯಕ ಕೃಷಿ ನಿರ್ದೇಶಕ ಶಿವಕುಮಾರ ಕಾಶಪ್ಪನವರ, ರೋಗಬಾಧಿತ ಬೆಳೆಯನ್ನು ಪರಿಶೀಲಿಸಿ ರೈತರಿಗೆ ಅಗತ್ಯ ಸಲಹೆ ನೀಡಿದರು.

ಈ ಕುರಿತು ಮಾತನಾಡಿದ ಅವರು, ಮುಂಗಾರು ಪೂರ್ವ ಮಳೆಯ ಹಿನ್ನೆಲೆಯಲ್ಲಿ ಅನೇಕ ರೈತರು ಅವಧಿಗೂ ಮುನ್ನ ಬಿತ್ತನೆ ಮಾಡಿದ್ದು, ಇಂತಹ ಬೆಳೆಗಳಲ್ಲಿ ರೋಗಬಾಧೆ ಕಾಣಿಸಿಕೊಳ್ಳುವ ಸಾಧ್ಯತೆ ಹೆಚ್ಚಿರುತ್ತದೆ ಎಂದರು.

**ರೈತರಿಗೆ ಕೃಷಿ ಇಲಾಖೆಯ ಸಲಹೆ**

ರೋಗಬಾಧೆ ಕಂಡುಬಂದ ತಕ್ಷಣ ರೈತರು ಸೂಕ್ತ ಕ್ರಿಮಿನಾಶಕ ಸಿಂಪಡಣೆ ಮಾಡಬೇಕು. 15 ಲೀಟರ್ ನೀರಿಗೆ 15 ಎಂಎಲ್ ಅಫಿಡೋಪೈರೋಪೆನ್ ಅಥವಾ 6 ಎಂಎಲ್ ಥಯಾಮೆಥೋಕ್ಸಾಮ್, ಅಥವಾ 10 ಗ್ರಾಂ ಡಿಯಾಫೆಂಥಿಯೋರಾನ್, ಅಥವಾ 5 ಎಂಎಲ್ ಇಮಿಡಾಕ್ಲೋಪ್ರಿಡ್ ಜೊತೆಗೆ 6 ಗ್ರಾಂ ಅಸಿಟಮಾಪ್ರಿಡ್ ಬೆರೆಸಿ ಸಿಂಪಡಣೆ ಮಾಡುವುದು ಪರಿಣಾಮಕಾರಿ ಎಂದು ತಿಳಿಸಿದರು.

ಹವಾಮಾನ ಇಲಾಖೆಯ ಮುನ್ಸೂಚನೆಯ ಪ್ರಕಾರ ಈ ವಾರ ಮಳೆಯ ಸಾಧ್ಯತೆ ಕಡಿಮೆ ಇರುವುದರಿಂದ ತೇವಾಂಶ ಕೊರತೆ ಇದ್ದರೆ ಬಿತ್ತನೆ ಮುಂದೂಡುವುದು ಉತ್ತಮ. ರೈತರು ಬೆಳೆದರ್ಶಕ ಆ್ಯಪ್‌ನಲ್ಲಿ ಬೆಳೆ ನೋಂದಣಿ ಮಾಡಿಸಿಕೊಳ್ಳುವುದರಿಂದ ಬೆಳೆವಿಮೆ, ಬೆಳೆಹಾನಿ ಪರಿಹಾರ ಹಾಗೂ ಬೆಂಬಲ ಬೆಲೆ ಸೌಲಭ್ಯ ಪಡೆಯಲು ಅನುಕೂಲವಾಗುತ್ತದೆ ಎಂದು ತಿಸಿದರು.

ಕಾರ್ಯಕ್ರಮದಲ್ಲಿ ರೈತರಾದ ಚನ್ನಪ್ಪ ಷಣ್ಮುಕಿ, ದ್ಯಾಮಣ್ಣ ಮೋದಿ, ಮಲ್ಲಪ್ಪ ಕಲ್ಲೂರ, ಮಲ್ಲಪ್ಪ ಸೊರಟೂರು, ಕೃಷಿ ಅಧಿಕಾರಿ ಚಂದ್ರಶೇಖರ ನರಸಮ್ಮನವರ, ಪಿ.ಕೆ. ಹೊನ್ನಪ್ಪನವರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಜಂಗಮ ಸಮಾಜದ ಸಾಮಾನ್ಯ ಸಭೆ ನಾಳೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಅಖಿಲ ಭಾರತ ಜಂಗಮ ಸೇವಾ ಸಮಿತಿ ವತಿಯಿಂದ ಸಾಮಾನ್ಯ ಸಭೆಯನ್ನು ಜೂನ್ 14ರಂದು ಬೆಳಿಗ್ಗೆ 11.30ಕ್ಕೆ ನಗರದ ಮುಳಗುಂದ ನಾಕಾ ಬಳಿಯ ಶ್ರೀ ಕುಮಾರೇಶ್ವರ ಧಾರ್ಮಿಕ ಪಾಠಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದೆ.

ಸಭೆಯಲ್ಲಿ ಸಮಿತಿಯ ಸಾಮಾನ್ಯ ಸದಸ್ಯರ ನೇಮಕ, ನೂತನ ಪದಾಧಿಕಾರಿಗಳ ಆಯ್ಕೆ ಸೇರಿದಂತೆ ಸಂಘಟನೆಯ ಅಭಿವೃದ್ಧಿಗೆ ಸಂಬಂಧಿಸಿದ ವಿವಿಧ ವಿಷಯಗಳ ಕುರಿತು ಚರ್ಚೆ ನಡೆಯಲಿದೆ.

ಸಮಿತಿ ಅಧ್ಯಕ್ಷ ಪ್ರಭಯ್ಯ ದಂಡಾವತಿಮಠ ಅಧ್ಯಕ್ಷತೆ ವಹಿಸಲಿದ್ದು, ಸಮಾಜದ ಸಂಘಟನೆ ಬಲವರ್ಧನೆ ಹಾಗೂ ಮುಂದಿನ ಕಾರ್ಯಚಟುವಟಿಕೆಗಳ ರೂಪುರೇಷೆಗಳ ಕುರಿತು ಸಮಾಲೋಚನೆ ನಡೆಸಲಾಗುವುದು.

ಸರ್ವ ಜಂಗಮ ಸಮಾಜದ ಗುರುಗಳು, ಹಿರಿಯರು, ಮಹಿಳಾ ಪ್ರತಿನಿಧಿಗಳು, ಸಮಾಜದ ಮುಖಂಡರು ಹಾಗೂ ಸಮಿತಿಯ ಸದಸ್ಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಅಮೂಲ್ಯ ಸಲಹೆ–ಸೂಚನೆಗಳನ್ನು ನೀಡುವಂತೆ ಸಮಿತಿಯ ಪ್ರಧಾನ ಕಾರ್ಯದರ್ಶಿ ತೋಟಯ್ಯ ಗುಡ್ಡಿಮಠ ಪ್ರಕಟಣೆಯಲ್ಲಿ ಕೋರಿದ್ದಾರೆ.

## ಎಸ್‌ಎಂಜೆವಿಜಿ ಕಾಲೇಜಿನಲ್ಲಿ ಬಾಲ ಕಾರ್ಮಿಕ ದಿನಾಚರಣೆ

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಅಂಗವಾಗಿ ಪಟ್ಟಣದ ಎಸ್‌ಟಿಪಿಎಂಬಿ ಸಂಸ್ಥೆಯ ಎಸ್‌ಎಂಜೆವಿಜಿ ಪಿಯು ಕಾಲೇಜಿನಲ್ಲಿ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಪ್ರಾಂಶುಪಾಲರಾದ ಸರಸ್ವತಿ ಹುಲ್ಲಮ್ಮನವರ ಮಾತನಾಡಿ, ಬಾಲಕಾರ್ಮಿಕ ಪದ್ಧತಿಯ ದುಷ್ಪರಿಣಾಮಗಳ ಕುರಿತು ವಿದ್ಯಾರ್ಥಿನಿಯರಲ್ಲಿ ಅರಿವು ಮೂಡಿಸಿದರು. ಪ್ರತಿಯೊಂದು ಮಗುವಿಗೂ ಶಿಕ್ಷಣ, ಆರೋಗ್ಯ ಮತ್ತು ಸುರಕ್ಷಿತ ಬಾಲ್ಯ ದೊರಕುವುದು ಮೂಲಭೂತ ಹಕ್ಕಾಗಿದ್ದು, ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಸಮಾಜದ ಎಲ್ಲ ವರ್ಗದವರು ಕೈಜೋಡಿಸಬೇಕು ಎಂದು ಕರೆ ನೀಡಿದರು.




ಈ ಸಂದರ್ಭದಲ್ಲಿ ವಿದ್ಯಾರ್ಥಿನಿಯರಿಗೆ ಮಕ್ಕಳ ಹಕ್ಕುಗಳು, ಸಾಮಾಜಿಕ ಜವಾಬ್ದಾರಿ ಹಾಗೂ ಮಾನವೀಯ ಮೌಲ್ಯಗಳ ಕುರಿತು ಮಾಹಿತಿ ನೀಡಲಾಯಿತು. ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ತಮ್ಮದೇ ಆದ ಕೊಡುಗೆ ನೀಡುವ ಸಂಕಲ್ಪದೊಂದಿಗೆ ವಿದ್ಯಾರ್ಥಿನಿಯರು ಪ್ರತಿಜ್ಞೆ ಸ್ವೀಕರಿಸಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಉಪನ್ಯಾಸಕರು, ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿನಿಯರು ಪಾಲ್ಗೊಂಡಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka